ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ದಾವಣಗೆರೆ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ದಶಕದ ನಡಿಗೆ... ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI RNI No: KARKAN/2014/54928 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11
ಸಂಚಿಕೆ: 121 Issuse:121
ದಿನಾಂಕ:17–06–2024 Date:17-06-2024
ಸೋಮವಾರ Monday
ಪುಟ:4 Page:4
ರೂ.: 3–00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080–31212322 ಮೊ.: 9902543494 E-mail:sahayavany@gmail.com

# ಮತ್ತೊಂದು ಭ್ರೂಣಗಳ ಹತ್ಯೆ ಜಾಲ

## ಬೆಳಗಾವಿಯಲ್ಲಿ ನಕಲಿ ವೈದ್ಯನ ಕೃತ್ಯ, ತೋಟದ ಮನೆಯಲ್ಲಿ ಭ್ರೂಣ ಪತ್ತೆ




ಬೆಳಗಾವಿ:–
ಬೆಂಗಳೂರು ಹಾಗೂ ಮಂಡ್ಯದಲ್ಲಿ ಕೆಲ ತಿಂಗಳ ಹಿಂದೆ ಹೆಣ್ಣು ಭ್ರೂಣಹತ್ಯೆಯ ಬೃಹತ್ ಜಾಲವೊಂದು ಪತ್ತೆಯಾದ ಬೆನ್ನಲ್ಲೇ ಬೆಳಗಾವಿ ಜಿಲ್ಲೆಯಲ್ಲಿ ನಕಲಿ ವೈದ್ಯನೊಬ್ಬ ಭ್ರೂಣ ಹತ್ಯೆ ಮಾಡಿರುವ ಪ್ರಕರಣವು ಬಯಲಾಗಿದೆ.
ಜಿಲ್ಲೆಯ ಕಿತ್ತೂರು ಪಟ್ಟಣದಲ್ಲಿ ನಕಲಿ ವೈದ್ಯ ಮಕ್ಕಳ ಮಾರಾಟ ಪ್ರಕರಣದ ಆರೋಪಿ ಅಬ್ದುಲ್ ಗಫಾರ್ ಲಾಡಖಾನ್ ಭ್ರೂಣಹತ್ಯೆ ಮಾಡಿದ್ದು, ಜಿಲ್ಲೆಯ ಕಿತ್ತೂರು ತಾಲೂಕಿನ ತಿಗಡೊಳ್ಳಿ ಗ್ರಾಮದ ಫಾರ್ಮ್‌ಹೌಸ್‌ನಲ್ಲಿ ಭ್ರೂಣದ ಶವವೊಂದು ಪತ್ತೆಯಾಗಿದ್ದು, ಇನ್ನಷ್ಟು ಭ್ರೂಣಗಳಿಗಾಗಿ ಶೋಧ ನಡೆಸಲಾಗಿದೆ.
ನಕಲಿ ವೈದ್ಯ ಅಬ್ದುಲ್ ಗಫಾರ್‌ಲಾಡಖಾನ್‌ನ ಸಹಾಯಕನಾಗಿರುವ ರೋಹಿತ್ ಕುಪ್ಪಸಗೌಡರ್‌ನನ್ನು ಕರೆದು–ಕೊಂಡು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಸೂಚನೆ ಮೇರೆಗೆ ಪೊಲೀಸರು, ಆರೋಗ್ಯ ಇಲಾಖೆ, ಎಫ್‌ಎಸ್‌ಎಲ್ ತಂಡ ಇಂದು ತಾಲೂಕಿನ ತಿಗಡೊಳ್ಳಿ ಬಳಿಯ ನಕಲಿ ವೈದ್ಯನ ಫಾರ್ಮ್‌ಹೌಸ್‌ನಲ್ಲಿ ಶೋಧ ನಡೆಸುತ್ತಿದ್ದಾಗ ಭ್ರೂಣದ ಶವ ಪತ್ತೆಯಾಗಿದೆ.
ಡಿಎಚ್‌ಒ ಡಾ.ಮಹೇಶ ಕೋಣಿ, ಎಸಿಪ್ರಭಾವತಿ ಫಕೀರಪುರ, ಡಿಎಸ್‌ಪಿ ರವಿ ನಾಯ್ಕ ನೇತೃತ್ವದಲ್ಲಿ ಶೋಧ ಕಾರ್ಯ ನಡೆಯುತ್ತಿದ್ದು, ಭ್ರೂಣಗಳನ್ನು ಹೂಳುತ್ತಿದ್ದ ರೋಹಿತ್ ಕುಪ್ಪಸಗೌಡರ್‌ನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಅಬ್ದುಲ್ ಗಫಾರ್ ಲಾಡಖಾನ್ ಫಾರ್ಮ್ ಹೌಸ್ ಪರಿಶೀಲನೆ ವೇಳೆ ತೋಟದಲ್ಲಿ ಮೂರು ಭ್ರೂಣಗಳ ಕಳೇಬರ ಪತ್ತೆಯಾಗಿವೆ.
ಭ್ರೂಣಗಳನ್ನು ಹತ್ಯೆ ಕೃತ್ಯದಲ್ಲಿ ತೊಡಗಿರುವ ನಕಲಿ ವೈದ್ಯ ಅಬ್ದುಲ್ ಗಫಾರ್ ಲಾಡಖಾನ್‌ಗೆ ರೋಹಿತ್ ಕುಪ್ಪಸಗೌಡರ್ ಹಲವು ವರ್ಷಗಳಿಂದ ಸಹಾಯಕನಾಗಿ ಕೆಲಸ ಮಾಡುತ್ತಿದ್ದಾನೆ. ತಿಗಡೊಳ್ಳಿ ಗ್ರಾಮದ ಬಳಿ ಇರುವ ಫಾರ್ಮ್‌ಹೌಸ್‌ನಲ್ಲಿ ಭ್ರೂಣಗಳನ್ನು ಹೂಳುವುದೇ ರೋಹಿತ್ ಕುಪ್ಪಸಗೌಡರ ಕೆಲಸವಾಗಿತ್ತು ಎಂದು ತಿಳಿದುಬಂದಿದೆ.
ಈತನನ್ನು ಫಾರ್ಮ್‌ಹೌಸ್‌ಗೆ ಕರೆದುಕೊಂಡು ಹೋಗಿರುವ ಅಧಿಕಾರಿಗಳು, ಶೋಧ ನಡೆಸುತ್ತಿದ್ದಾರೆ. ರೋಹಿತ್ ತೋರಿಸಿದ ಜಾಗದಲ್ಲಿಯೇ ಒಂದು ಭ್ರೂಣ ಪತ್ತೆಯಾಗಿರುವ ಕಾರಣ ಇನ್ನಷ್ಟು ಭ್ರೂಣಗಳು ಇರಬಹುದು ಎಂಬ ಶಂಕೆಯಿಂದ ಶೋಧ ಕಾರ್ಯ ಮುಂದುವರಿಸಲಾಗಿದೆ.
ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಅಬ್ದುಲ್ ಗಫಾರ್ ಲಾಡಖಾನ್ ಹಿಂದೆ ಯಾರಿದ್ದಾರೆ. ಜಾಲದಲ್ಲಿ ಯಾರೆಲ್ಲ **–3ನೇ ಪುಟಕ್ಕೆ**

## ರೇಣುಕಾಸ್ವಾಮಿ ಹತ್ಯೆ, ಮ್ಯಾನೇಜರ್ ದೇವರಾಜ್ ವಶಕ್ಕೆ

ಬೆಂಗಳೂರು:–
ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಮೊದಲ ಆರೋಪಿ ನಟ ದರ್ಶನ್ ಆಪ್ತೆ ಪವಿತ್ರಾ ಗೌಡ ಮ್ಯಾನೇಜರ್ ದೇವರಾಜ್‌ನನ್ನು
ಪೊಲೀಸರು ವಶಕ್ಕೆ ಪಡೆದು ತೀವ್ರ ವಿಚಾರಣೆ ಕೈಗೊಂಡಿದ್ದಾರೆ.ಈ ನಡುವೆ ರೇಣುಕಾಸ್ವಾಮಿಯ ಕ್ರೂರ ಕೊಲೆಗೂ ಮುನ್ನ ಆತನ ಮೈಮೇಲಿದ್ದ ಒಡವೆಗಳನ್ನು ನಟ ದರ್ಶನ್ ಗ್ಯಾಂಗ್ ದೋಚಿರುವುದು ತನಿಖೆಯ ವೇಳೆ ಬಯಲಾಗಿದೆ.
ಈಗಾಗಲೇ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ16 ಮಂದಿ ಆರೋಪಿಗಳನ್ನು ಬಂಧಿಸಿರುವ ಅನ್ನಪೂರ್ಣೇಶ್ವರಿನಗರ ಪೊಲೀಸರು ಪವಿತ್ರಾ ಗೌಡ ಮ್ಯಾನೇಜರ್ ದೇವರಾಜ್‌ನನ್ನು ನಿನ್ನೆ ಮಧ್ಯರಾತ್ರಿ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.
ರೇಣುಕಾಸ್ವಾಮಿ ಕೊಲೆಯಾದ ಶೆಡ್‌ಗೆ ಪವಿತ್ರಾ ಜತೆಗೆ ಕೃತ್ಯ ನಡೆದ ದಿನ ದೇವರಾಜ್ ಕೂಡ ಹೋಗಿದ್ದ ಎನ್ನಲಾಗಿದೆ. ಇದೇ ಕಾರಣಕ್ಕೆ ದೇವರಾಜ್‌ನನ್ನು ಪೊಲೀಸರು ವಶ ಪಡೆದುಕೊಂಡಿದ್ದಾರೆ. ಪವಿತ್ರಾ ಗೌಡ ಮನೆಯಲ್ಲಿ ಇಂದು ಪೊಲೀಸರು ಮಹಜರು ನಡೆಸಲಿದ್ದಾರೆ. ರೇಣುಕಾಸ್ವಾಮಿ ಮೇಲೆ ಹಲ್ಲೆ ನಡೆಸಿದ ನಂತರ ಪವಿತ್ರಾಗೌಡ ನೇರವಾಗಿ ತಮ್ಮ ಮನೆಗೆ ಹೋಗಿದ್ದರು. ರೇಣುಕಾ ಸ್ವಾಮಿ ಮೇಲೆ ಮೊದಲು ಹಲ್ಲೆ ನಡೆಸಿದ್ದೇ ಪವಿತ್ರಾ ಗೌಡ ಎನ್ನಲಾಗಿದೆ.
ಪವಿತ್ರಾಗೌಡ ನೋಡುತ್ತಿದ್ದಂತೆ ರೇಣುಕಾಸ್ವಾಮಿ ಪುಟ 2 ಪವಿತ್ರಾ ಕಾಲಿಗೆ ಬಿದ್ದು ತಪ್ಪಾಯ್ತು ಅಂತ ಕ್ಷಮೆ ಕೇಳಿದ್ದನಂತೆ. ಸದ್ಯ ಪವಿತ್ರಾ ಮನೆಯಲ್ಲಿ ಪೊಲೀಸರು ಆ ದಿನ ಪವಿತ್ರಾ ಧರಿಸಿದ್ದ ಬಟ್ಟೆ ಹಾಗೂ ರೇಣುಕಾಸ್ವಾಮಿ ಮೇಲೆ ಹಲ್ಲೆ ನಡೆಸಿದ್ದ ಚಪ್ಪಲಿಯನ್ನು ಜಪ್ತಿ ಮಾಡಲಿದ್ದಾರೆ. ಪ್ರಕರಣದಲ್ಲಿ ಪವಿತ್ರಾ ಚಪ್ಪಲಿ ಕೂಡ ಮಹತ್ವದ ಸಾಕ್ಷ್ಯವಾಗಲಿದೆ.
ಇಂದಿನಿಂದ ಮತ್ತೊಂದು ಹಂತದ ತನಿಖೆಗೆ ಮುಂದಾಗಿದ್ದಾರೆ. ಪೊಲೀಸರು ಸಾಕ್ಷಾಧಾರಗಳನ್ನು ಮುಂದಿಟ್ಟುಕೊಂಡು ವಿಚಾರಣೆ ಪೊಲೀಸರು ನಡೆಸುತ್ತಿದ್ದಾರೆ. ಆರೋಪಿಗಳ ಬಳಿ ಇದ್ದ ಹತ್ತುಮೊಬೈಲ್‌ಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ. ಮೊಬೈಲ್‌ನಲ್ಲಿ ಕೆಲ ಸ್ಫೋಟಕ ವಿಚಾರಗಳು ಪತ್ತೆಯಾಗಿವೆ. ವೆಪನ್‌ಗಳು, 30 ಲಕ್ಷ ರೂ. ಹಣ, ಕಾರುಗಳು ಸೇರಿ ಹಲವು ವಸ್ತುಗಳು ಜಪ್ತಿಯಾಗಿವೆ. ಈಗಾಗಲೇ ಆರೋಪಿಗಳನ್ನು ವಿಚಾರಣೆ ಮಾಡಿ ಪೊಲೀಸರು ಹೇಳಿಕೆ ದಾಖಲಿಸಿಕೊಂಡಿದ್ದಾರೆ.
**ಪ್ರಶ್ನೆಗಳ ಸುರಿಮಳೆ:**
ಶರಣಾಗಿರುವ ಆರೋಪಿಗಳನ್ನು ಡ್ರಿಲ್ ಮಾಡುತ್ತಿರುವ ಪೊಲೀಸರು, ಪ್ರಶ್ನೆಗಳ ಸುರಿಮಳೆಗೈಯುತ್ತಿದ್ದಾರೆ. ಪ್ರಕರಣದ ಸಂಬಂಧ ನೀವೇನಾದರೂ
ಹಣ ಪಡೆದಿದ್ರಾ? ನಿಮ್ಮನ್ನು ಸಂಪರ್ಕಿಸಿದವರು ಯಾರು? ಯಾರ ಮಾತನ್ನು ನೀವು ಕೇಳಿ ನೀವು ಪ್ರಕರಣದಲ್ಲಿ ಭಾಗಿಯಾಗಿದ್ದೀರಿ, ದರ್ಶನ ಜತೆ **–3ನೇ ಪುಟಕ್ಕೆ**

## ನೀಟ್, ಸಮಗ್ರ ತನಿಖೆಗೆ ಒತ್ತಾಯ



ನವದೆಹಲಿ:–
ನೀಟ್ ಪರೀಕ್ಷಾ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಧಾನಿ ನರೇಂದ್ರ ಮೋದಿ ಅವರ ಮೌನ ಪ್ರಶ್ನಿಸಿರುವ ಪ್ರತಿಪಕ್ಷ ಕಾಂಗ್ರೆಸ್, ಸುಪ್ರೀಂಕೋರ್ಟ್ ಮೇಲ್ವಿಚಾರಣೆಯ ಸಮಗ್ರ ತನಿಖೆ ನಡೆಸುವಂತೆ ಒತ್ತಾಯಿಸಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ರ್‍ಯಾಂಕ್ ನೀಡುವ ಸಮಸ್ಯೆಯೇ ನೀಟ್ ಅವ್ಯವಹಾರಕ್ಕೆ ಕಾರಣವಾಗಿದೆ, ಕೃಪಾಂಕ ನೀಡಿದ್ದು ಸಮಸ್ಯೆಯಾಗಿ ಉಳಿದಿಲ್ಲ. ಇಡೀ ನೀಟ್ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದ್ದು ಸುಪ್ರೀಂಕೋರ್ಟ್ ನ್ಯಾಯಾಧೀಶರ ಮಾರ್ಗದರ್ಶನದಲ್ಲಿ ತನಿಖೆ ನಡೆಯಲಿ ಎಂದು ಒತ್ತಾಯಿಸಿದ್ದಾರೆ.
ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಬಾರಿ ಪ್ರಮಾಣದಲ್ಲಿ ಭ್ರಷ್ಟಾಚಾರ ನಡೆದಿದೆ. ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಕ್ರಮಗಳಿಂದ ನೀಟ್ ಪರೀಕ್ಷೆಗೆ ಹಾಜರಾಗಿದ್ದ 24 ಲಕ್ಷ ವಿದ್ಯಾರ್ಥಿಗಳ ಭವಿಷ್ಯ ಅತಂತ್ರವಾಗಿದೆ ಎಂದು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಪ್ರತಿಕ್ರಿಯೆ ನೀಡಿ, ನೀಟ್ ಹಗರಣ ಸುಮಾರು 24 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳನ್ನು ಆತಂಕಕ್ಕೆ ಸಿಲುಕುವಂತೆ ಮಾಡಿದೆ ಎಂದು ಹೇಳಿದ್ದಾರೆ.
ನೀಟ್ ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದ್ದರೂ ಸೂಕ್ತ ಕ್ರಮ ಕೈಗೊಳ್ಳದೆ ಕೇಂದ್ರ ಶಿಕ್ಷಣ ಸಚಿವರ ದುರಹಂಕಾರದ ಪ್ರತಿಕ್ರಿಯೆಯಿಂದ 24 ಲಕ್ಷ ವಿದ್ಯಾರ್ಥಿಗಳು ಮತ್ತು ಅವರ ಪೋಷಕರ ಸಮಸ್ಯೆಗೆ ಸಿಲುಕುವಂತಾಗಿದೆ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ಪ್ರಧಾನಕಾರ್ಯದರ್ಶಿ ಪ್ರಿಯಾಂಕ ಗಾಂಧಿ ಅವರೂ ನೀಟ್ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿ–ದ್ದಾರೆ.
**ಡಿಎಂಕೆ ವಾಗ್ದಾಳಿ:** **–3ನೇ ಪುಟಕ್ಕೆ**

## ಸಿಕ್ಕ ಸ್ಥಾನಕ್ಕೆ ತೃಪ್ತಿ, ಸಚಿವರ ಇಂಗಿತ



ಬೆಂಗಳೂರು:–
ಕಾಂಗ್ರೆಸ್‌ನಲ್ಲಿ ಮತ್ತೆ ಹೆಚ್ಚುವರಿ ಉಪಮುಖ್ಯಮಂತ್ರಿ ಹುದ್ದೆಗಳನ್ನು ಸೃಷ್ಟಿಸುವ ವಿಚಾರ ಚರ್ಚೆಗೆ ಗ್ರಾಸವಾಗಿರುವಾಗಲೇ ಉಪಮುಖ್ಯಮಂತ್ರಿ ಹುದ್ದೆ ಮೇಲೆ ಕಣ್ಣಿಟ್ಟಿರುವ ಸತೀಶ್‌ಜಾರಕಿ ಹೊಳಿ ಉಪಮುಖ್ಯಮಂತ್ರಿ ಹುದ್ದೆ ಕೊಡಿ ಎಂದು ನಾನೇನು ಕೇಳಲ್ಲ ಎಂದಿದ್ದಾರೆ, ಕಂದಾಯ ಸಚಿವ ಕೃಷ್ಣಭೈರೇಗೌಡ ಇರುವ ಹುದ್ದೆಯಲ್ಲೇ ತೃಪ್ತಿಪಡೋಣ,ಡಿಸಿಎಂ ಹುದ್ದೆ ಸೃಷ್ಟಿ ಬಗ್ಗೆ ಪಕ್ಷ ನಿರ್ಧರಿಸುತ್ತದೆ ಎಂದು ಹೇಳಿದ್ದಾರೆ.
ಬೆಳಗಾವಿಯಲ್ಲಿಂದು ಈ ಇಬ್ಬರು ಸಚಿವರು ಪ್ರತ್ಯೇಕವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ್ದು, ಸತೀಶ್ ಜಾರಕಿಹೊಳಿ ಉಪಮುಖ್ಯಮಂತ್ರಿ ಹುದ್ದೆ ಕೊಡಿ ಎಂದು ನಾನೇನು ಕೇಳಲ್ಲ ಈ ಮೊದಲು 3 ಡಿಸಿಎಂ ಸ್ಥಾನಗಳನ್ನು **–3ನೇ ಪುಟಕ್ಕೆ**

## ಭವಿಷ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉಸಿರಾಡುವುದಕ್ಕೂ ತೆರಿಗೆ ವಿಧಿಸಿದರೂ ಆಶ್ಚರ್ಯವಿಲ್ಲ; ಬಿಜೆಪಿ ಲೇವಡಿ




ಮಂಗಳೂರು:–
ಗ್ಯಾರಂಟಿ ಹೆಸರಿನಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯವನ್ನು ಲೂಟಿ ಹೊಡೆಯಲು ಹೊರಟಿದೆ. ಪೆಟ್ರೋಲ್ ಮೇಲಿನ ರಾಜ್ಯ ಸೆಸ್ ನ್ನು ಪ್ರತಿ ಲೀಟರ್ ಮೇಲೆ 3 ರೂ. ಹೆಚ್ಚಳ ಮಾಡುವ ಆದೇಶಕ್ಕೆ ಸಹಿ ಹಾಕುವ ಮೂಲಕ ಸಿಎಂ ಸಿದ್ದರಾಮಯ್ಯ ಖಾಲಿಯಾದ ಬೊಕ್ಕಸ ತುಂಬಿಕೊಳ್ಳಲು ಹೊರಟಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.
ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಹಾಗೂ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿರುವ ಸುನೀಲ್ ಕುಮಾರ್ ಅವರು, ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ಭವಿಷ್ಯದಲ್ಲಿ ಕಾಂಗ್ರೆಸ್ ಸರ್ಕಾರ ಜನರು ಉಸಿರಾಡುವುದಕ್ಕೂ ತೆರಿಗೆ ವಿಧಿಸಿದರೆ ಆಶ್ಚರ್ಯವಿಲ್ಲ ಎಂದು ಲೇವಡಿ ಮಾಡಿದರು.
ಪೆಟ್ರೋಲ್ ಸೆಸ್ ಹೆಚ್ಚಿಸಿ ಆದೇಶ ಹೊರಡಿಸುವ ಮೂಲಕ ರಾಜ್ಯದ ಖಾಲಿ ಖಜಾನೆ ತುಂಬಿಸುವ ಗುರಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹೊಂದಿದ್ದಾರೆ. ಸರಕಾರ ಎಲ್ಲ ರೀತಿಯಿಂದಲೂ ಜನರಿಂದ ಆದಾಯ ಸುಲಿಗೆ ಮಾಡುತ್ತಿದೆ. ಲಭ್ಯ ಇರುವ ಎಲ್ಲ ಆದಾಯ ಮೂಲಗಳಿಂದ ಸರ್ಕಾರ ಜನರನ್ನು ಎಷ್ಟು ಸುಲಿಗೆ ಮಾಡಿದರೂ ರಾಜಸ್ವ ಸಂಗ್ರಹ ದಿನೇ ದಿನೇ ಕುಸಿದು ಬೀಳುತ್ತಿದೆ. ಈ ವರ್ಷದ ತೆರಿಗೆ ಸಂಗ್ರಹಣೆಯಲ್ಲಿ ಹದಿಮೂರು ಸಾವಿರ ಕೋಟಿ ಕೊರತೆ ಸೃಷ್ಟಿಯಾಗಿರುವುದರಿಂದ ರಾಜ್ಯ ಸರ್ಕಾರ **–3ನೇ ಪುಟಕ್ಕೆ**

## ಕರ್ನಾಟಕದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ




ನವದೆಹಲಿ:–
ಕರ್ನಾಟಕದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಿರುವುದನ್ನು ಬಿಜೆಪಿಯ ರಾಷ್ಟ್ರೀಯ ಐಟಿ ಸೆಲ್ ಉಸ್ತುವಾರಿ ಅಮಿತ್ ಮಾಳ ವೀಯ ಅವರು ಕರ್ನಾಟಕ ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿ ವಿರುದ್ಧ ಭಾನುವಾರ ವಾಗ್ದಾಳಿ ನಡೆಸಿದ್ದಾರೆ. ಮಾಳವೀಯ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದು, ಕಾಂಗ್ರೆಸ್ ಸರ್ಕಾರದ ಖಾತರಿ ಯೋಜನೆಗಳಿಗೆ ಹಣ ಹೊಂದಿಸಲು ಇಂಧನ ಬೆಲೆ ಏರಿಕೆ ಮಾಡಲಾಗಿದೆ ಎಂದಿದ್ದ ಸಚಿವ ಎಂಬಿ ಪಾಟೀಲ್ ಅವರ ಹೇಳಿಕೆಯನ್ನು ಗುರಿಯಾಗಿಸಿ ಟೀಕಿಸಿದ್ದಾರೆ. ನೆರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಪೆಟ್ರೋಲ್, ಡೀಸೆಲ್ ದರ ಕಡಿಮೆಯಿದೆ. ತಮಿಳುನಾಡು ಹಾಗೂ ಇತರ ರಾಜ್ಯಗಳಲ್ಲಿ 5 ರಿಂದ 10 ರೂಪಾಯಿ ಹೆಚ್ಚಿಗೆ ದರ ಇದೆ. ಸರ್ಕಾರಕ್ಕೆ ಆದಾಯ ಕಡಿಮೆಯಾಗುತ್ತಿದೆ ಅಭಿವೃದ್ಧಿಗೆ, ಗ್ಯಾರಂಟಿ ಯೋಜನೆಗೆ ಹಣ ಬೇಕಲ್ಲ. ಹೀಗಾಗಿ ಬೆಲೆ ಏರಿಕೆ ಮಾಡಲಾಗಿದೆ. ಬೆಲೆ ಏರಿಕೆಯ ಹೊರತಾಗಿಯೂ ಕರ್ನಾಟಕದ **–3ನೇ ಪುಟಕ್ಕೆ**

## ಚಕ್ರಗಳ ಮೇಲೆ ಆರೋಗ್ಯ ತಪಾಸಣೆಗೆ ಚಾಲನೆ



ಬೆಂಗಳೂರು:–
ದೇಶದ ಮುಂಚೂಣಿಯಲ್ಲಿರುವ ಆರೋಗ್ಯ ಸೇವಾ ಸರಪಳಿಗಳಲ್ಲಿ ಒಂದಾದ ಅಪೋಲೊ ಆಸ್ಪತ್ರೆ ಸಮೂಹ ಕ್ರಾಂತಿಕಾರಿ ವಿಧಾನದಲ್ಲಿ ಆರೋಗ್ಯ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ಸೇವೆಯನ್ನು ನಿಮ್ಮ ಮನೆ ಬಾಗಿಲಿಗೆ ತಲುಪಿಸಲು ಮುಂದಾಗಿದೆ. ಈ ನಿಟ್ಟಿನಲ್ಲಿ ಅಪೋಲೊ ಹೆಲ್ತ್ ಚೆಕ್ ಆನ್ ವೀಲ್ಸ್ ಅನ್ನು ಪ್ರಾರಂಭಿಸಿದೆ.
ಸಂಚಾರಿ ಆರೋಗ್ಯ ಸುರಕ್ಷಾ ವೇದಿಕೆಯನ್ನು ಸಮಗ್ರ ಆರೋಗ್ಯ ತಪಾಸಣೆಗಳನ್ನು ನೇರವಾಗಿ ಕೆಲಸದ ಸ್ಥಳಗಳು, ಅವಕಾಶ ವಂಚಿತ ಸಮುದಾಯಗಳು, **–3ನೇ ಪುಟಕ್ಕೆ**

## 3 ದಿನ ರಾಜ್ಯದಲ್ಲಿ ಮಳೆ ಮುನ್ಸೂಚನೆ



ನವದೆಹಲಿ,ಜೂ.16–
ಮುಂದಿನ 5 ದಿನಗಳ ಕಾಲ ಕರ್ನಾಟಕದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆ ಇದೆ. ಜೂನ್ 20ರವರೆಗೆ ರಾಜ್ಯದಲ್ಲಿ ಮಳೆ ಮುಂದುವರೆಯಲಿದೆ, ಇದರೊಂದಿಗೆ ಗಂ–ಟೆಗೆ 40 ರಿಂದ 50 ಕಿ.ಮೀ ವೇಗದಲ್ಲಿ ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಕರಾವಳಿ ಕರ್ನಾಟಕ ಮತ್ತು ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ವಾಡಿಕೆಯಂತೆ ಭಾರೀ ಮಳೆಯಾಗಲಿದ್ದು, ದಕ್ಷಿಣ ಕನ್ನಡ, ಉಡುಪಿ, ಕಾಸರಗೋಡು, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆ ಎಚ್ಚರಿಕೆ ನೀಡಲಾಗಿದೆ. ಉತ್ತರ ಒಳನಾಡಿನ ಬೆಳಗಾವಿ, ಬಾಗಲಕೋಟೆ, ಕಲಬುರಗಿ, ವಿಜಯಪುರ ಮತ್ತು ಕೊಪ್ಪಳ ಜಿಲ್ಲೆಗಳಲ್ಲೂ ಮಳೆಯಾಗುವ ಎಚ್ಚರಿಕೆ ನೀಡಲಾಗಿದೆ.
ದಕ್ಷಿಣ ಭಾರತದ ಕೆಲ ರಾಜ್ಯಗಳಲ್ಲಿ ಕಳೆದ ಕೆಲ ದಿನಗಳಿಂದ ನಿರಂತರವಾಗಿ ಮಳೆಯಾಗುತ್ತಿದೆ, ಉತ್ತರ ಭಾರತದ ಬಹುತೇಕ ಭಾಗಗಳಲ್ಲಿ **–3ನೇ ಪುಟಕ್ಕೆ**

# ಸ್ಕಾಟ್ಲೆಂಡ್ ವಿರುದ್ಧ ಗೆದ್ದ ಆಸ್ಟ್ರೇಲಿಯಾ; ಸೂಪರ್ 8ಗೆ ಲಗ್ಗೆಯಿಟ್ಟ ಇಂಗ್ಲೆಂಡ್



ಟಿ20 ವಿಶ್ವಕಪ್‌ನಲ್ಲಿ ಸೂಪರ್ 8 ಹಂತಕ್ಕೆ ಪ್ರವೇಶಿಸುವ ಸ್ಕಾಟ್ಲೆಂಡ್ ತಂಡದ ಕನಸು ಭಗ್ನವಾಗಿದ್ದು, ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ತಂಡಗಳು ಬಿ ಗುಂಪಿನಿಂದ ಸೂಪರ್ 8 ಹಂತಕ್ಕೆ ಪ್ರವೇಶ ಪಡೆದಿವೆ. ಸೆಂಟ್ ಲೂಸಿಯಾದಲ್ಲಿ ನಡೆದ ಸ್ಕಾಟ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಆಸ್ಟ್ರೇಲಿಯಾ ಐದು ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ, ಇಂಗ್ಲೆಂಡ್ ಸೂಪರ್ 8 ಹಂತಕ್ಕೆ ತಲುಪಲು ಸಹಾಯ ಮಾಡಿತು. ಆಸ್ಟ್ರೇಲಿಯಾ ಮತ್ತು ಸ್ಕಾಟ್ಲೆಂಡ್ ನಡುವಿನ ಖ20 ವಿಶ್ವಕಪ್ ಕ್ರಿಕೆಟ್ ಪಂದ್ಯದ ಸಂದರ್ಭದಲ್ಲಿ ಆಸ್ಟ್ರೇಲಿಯಾದ ಗ್ಲೆನ್ ಮ್ಯಾಕ್ಸ್‌ವೆಲ್ ವಿಕೆಟ್ ಕಿತ್ತ ನಂತರ ಸ್ಕಾಟ್ಲೆಂಡ್‌ನ ಮ್ಯಾಥ್ಯೂ ಕ್ರಾಸ್ (ಎಡ) ಸಂಭ್ರಮಿಸಿದರು. ಆಸ್ಟ್ರೇಲಿಯಾ ಮತ್ತು ಸ್ಕಾಟ್ಲೆಂಡ್ ನಡುವಿನ ಖ20 ವಿಶ್ವಕಪ್ ಕ್ರಿಕೆಟ್ ಪಂದ್ಯದ ಸಂದರ್ಭದಲ್ಲಿ ಆಸ್ಟ್ರೇಲಿಯಾದ ಗ್ಲೆನ್ ಮ್ಯಾಕ್ಸ್‌ವೆಲ್ ವಿಕೆಟ್ ಕಿತ್ತ ನಂತರ ಸ್ಕಾಟ್ಲೆಂಡ್‌ನ ಮ್ಯಾಥ್ಯೂ ಕ್ರಾಸ್ (ಎಡ) ಸಂಭ್ರಮಿಸಿದರು. ಟಿ20 ವಿಶ್ವಕಪ್‌ನಲ್ಲಿ ಸೂಪರ್ 8 ಹಂತಕ್ಕೆ ಪ್ರವೇಶಿಸುವ ಸ್ಕಾಟ್ಲೆಂಡ್ ತಂಡದ ಕನಸು ಭಗ್ನವಾಗಿದ್ದು, ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ತಂಡಗಳು ಬಿ ಗುಂಪಿನಿಂದ ಸೂಪರ್ 8 ಹಂತಕ್ಕೆ ಪ್ರವೇಶ ಪಡೆದಿವೆ. ಸೆಂಟ್ ಲೂಸಿಯಾದಲ್ಲಿ ನಡೆದ ಸ್ಕಾಟ್ಲೆಂಡ್ ವಿರುದ್ಧದ ಪಂದ್ಯದಲ್ಲಿ ಆಸ್ಟ್ರೇಲಿಯಾ ಐದು ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸುವ ಮೂಲಕ, ಇಂಗ್ಲೆಂಡ್ ಸೂಪರ್ 8 ಹಂತಕ್ಕೆ ತಲುಪಲು ಸಹಾಯ ಮಾಡಿತು. ಸ್ಕಾಟ್ಲೆಂಡ್ ಮತ್ತು ಇಂಗ್ಲೆಂಡ್ ತಲಾ 5 ಅಂಕಗಳನ್ನು ಹೊಂದಿದ್ದರೂ ರನ್ ರೇಟ್ ಉತ್ತಮವಾಗಿದ್ದ ಕಾರಣ ಇಂಗ್ಲೆಂಡ್ ಮುಂದಿನ ಹಂತಕ್ಕೆ ಅರ್ಹತೆ ಪಡೆಯುವಲ್ಲಿ ಯಶಸ್ವಿಯಾಗಿದೆ. ಟಾಸ್ ಗೆದ್ದ ಆಸ್ಟ್ರೇಲಿಯಾ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಆಸ್ಟ್ರೇಕಿಯಾದ ಬಲಿಷ್ಠ ಬೌಲಿಂಗ್ ದಾಳಿಯನ್ನು ಸಮರ್ಥವಾಗಿ ಎದುರಿಸಿದ ಸ್ಕಾ-ಟ್ಲೆಂಡ್ 20 ಓವರ್ ಗಳಲ್ಲಿ 5 ವಿಕೆಟ್ ಕಳೆದುಕೊಂಡು 180 ರನ್ ಗಳಿಸುವ ಮೂಲಕ ಸವಾಲಿನ ಗುರಿಯನ್ನು ನೀಡಿತು. ಬ್ರೆಂಡನ್ ಮೆಕ್‌ಮುಲನ್ 34 ಎಸೆತಗಳಲ್ಲಿ 60 ರನ್ ಗಳಿಸುವ ಮೂಲಕ ಸ್ಕಾಟ್ಲೆಂಡ್ ಉತ್ತಮ ಮೊತ್ತ ಕಲೆಹಾಕಲು ನೆರವಾದರು. ನಾಯಕ ಬೆರಿಂಗ್ಟನ್ ಅಜೇಯ 42 ರನ್ ಗಳಿಸಿದರೆ, ಮುನ್ಸೆ 35 ರನ್ ಗಳಿಸಿದರು. ಆಸ್ಟ್ರೇಲಿಯಾ ಮತ್ತು ಸ್ಕಾಟ್ಲೆಂಡ್ ನಡುವಿನ ಖ20 ವಿಶ್ವಕಪ್ ಕ್ರಿಕೆಟ್ ಪಂದ್ಯದ ಸಂದರ್ಭದಲ್ಲಿ ಆಸ್ಟ್ರೇಲಿಯಾದ ಗ್ಲೆನ್ ಮ್ಯಾಕ್ಸ್‌ವೆಲ್ ವಿಕೆಟ್ ಕಿತ್ತ ನಂತರ ಸ್ಕಾಟ್ಲೆಂಡ್‌ನ ಮ್ಯಾಥ್ಯೂ ಕ್ರಾಸ್ (ಎಡ) ಸಂಭ್ರಮಿಸಿದರು. ಭಾರತ ಕೆನಡಾ ಪಂದ್ಯ ರದ್ದು, ಭಾರತ ಅಗ್ರಸ್ಥಾನ 181 ರನ್‌ಗಳ ಸವಾಲಿನ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ ಆರಂಭಿಕ ಹಂತದಲ್ಲಿ ರನ್ ಗಳಿಸಲು ಪರದಾಡಿತು. ಡೇವಿಡ್ ವಾರ್ನರ್ ಕೇವಲ ಒಂದು ರನ್ ಗಳಿಸಿ ಔಟಾದರೆ, ನಾಯಕ ಮಿಚ್ ಮಾರ್ಷ್ 8 ರನ್ ಗಳಿಸಿ ಔಟಾದರು. ಗ್ಲೆನ್ ಮ್ಯಾಕ್ಸ್‌ವೆಲ್ 11 ರನ್ ಗಳಿಸಿ ಔಟಾದರು. 50 ರನ್ ಗಳಿಸುವಷ್ಟರಲ್ಲಿ ಪ್ರಮುಖ 3 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದ ಆಸ್ಟ್ರೇಲಿಯಾಗೆ ಟ್ರಾವಿಸ್ ಹೆಡ್ ಮತ್ತು ಮಾರ್ಕಸ್ ಸ್ಟೊಯಿನಿಸ್ ಆಸರೆಯಾದರು. ಟ್ರಾವಿಸ್ ಹೆಡ್ 49 ಎಸೆತಗಳಲ್ಲಿ 68 ರನ್ ಗಳಿಸಿದರೆ, ಮಾರ್ಕಸ್ ಸ್ಟೊಯಿನಿಸ್ 29 ಎಸೆತಗಳಲ್ಲಿ 59 ರನ್ ಗಳಿಸಿದರು. ಟಿಮ್ ಡೇವಿಡ್ 14 ಎಸೆತಗಳಲ್ಲಿ ಅಜೇಯ 24 ರನ್ ಗಳಿಸುವ ಮೂಲಕ ತಂಡವನ್ನು ಗೆಲುವಿನ ದಡ ತಲುಪಿಸಿದರು. 19.4 ಓವರ್ ಗಳಲ್ಲಿ 5 ವಿಕೆಟ್ ಕಳೆದುಕೊಂಡು 186 ರನ್ ಗಳಿಸಿದ ಆಸ್ಟ್ರೇಲಿಯಾ ಲೀಗ್ ಹಂತದಲ್ಲಿ ಅಜೇಯವಾಗಿ ಉಳಿದು, ಸೂಪರ್ 8 ತಲುಪಿತು.

# ಗೋಮಾಂಸ ಅಕ್ರಮ ವ್ಯಾಪಾರ ನಡೆಸುತ್ತಿದ್ದ 11 ಮುಸ್ಲಿಮರ ಮನೆ ಕೆಡವಿದ ಪೊಲೀಸರು; 150 ಹಸುಗಳ ರಕ್ಷಣೆ

ಭೋಪಾಲ್:-

ಅಕ್ರಮ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಮಧ್ಯ ಪ್ರದೇಶ ಸರ್ಕಾರ ಕಠಿಣ ಕ್ರಮ ಕೈಗೊಂಡಿದೆ. ಅಪರಾಧಿಗಳ ಅನಧಿಕೃತ ಕಟ್ಟಡ ನಿರ್ನಾಮ ಮಾಡಿ ತಕ್ಕ ಪಾಠ ಕಲಿಸಲು ಮುಂದಾಗಿದೆ. ಇದೀಗ ಅಂತಹದ್ದೇ ಮತ್ತೊಂದು ದಿಟ್ಟ ನಿರ್ಧಾರ ಕೈಗೊಂಡು ದೇಶದ ಗಮನ ಸೆಳೆದಿದೆ. ಅಕ್ರಮವಾಗಿ ಬೀಫ್ ವ್ಯಾಪಾರ ಮಾಡುತ್ತಿದ್ದ, 11 ಮಂದಿ ಮುಸ್ಲಿಮರು ಸರ್ಕಾರಿ ಜಾಗದಲ್ಲಿ ನಿರ್ಮಿಸಿದ ಮನೆಗಳನ್ನು ಕೆಡವಿ ಹಾಕಿದೆ. ಮಧ್ಯ ಪ್ರದೇಶದ ಬುಡಕಟ್ಟು ಪ್ರಾಬಲ್ಯ ಹೊಂದಿರುವ ಮಾಂಡ್ಲಾದಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿನ ಅಕ್ರಮ ಗೋಮಾಂಸ ವ್ಯಾಪಾರದ ವಿರುದ್ಧದ ಕ್ರಮದ ಭಾಗವಾಗಿ ಈ ಮನೆಗಳನ್ನು ನೆಲಸಮಗೊಳಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ. ನೈನ್ಪುರದ ಭೈನ್ವಾಹಿ ಪ್ರದೇಶದಲ್ಲಿ ಹೆಚ್ಚಿನ ಸಂ-ಖ್ಯೆಯ ಹಸುಗಳನ್ನು ಮಾಂಸಕ್ಕಾಗಿ ಕೂಡಿಡಲಾಗಿದೆ ಎನ್ನುವ ಖಚಿತ ಮಾಹಿತಿ ಪಡೆದ ಪೊಲೀಸರು ದಾಳಿ ನಡೆಸಿ ಈ ಕ್ರಮ ಕೈಗೊಂಡಿದ್ದಾರೆ ಎಂದು ಮಾಂಡ್ಲಾ ಪೊಲೀಸ್ ವರಿಷ್ಠಾಧಿಕಾರಿ ರಜತ್ ಸಕ್ಲೇಚಾ ಪಿಟಿಐಗೆ ತಿಳಿಸಿದ್ದಾರೆ. 'ಪೊಲೀಸ್ ತಂಡ ದಾಳಿ ನಡೆಸಿದಾಗ ಆರೋಪಿಗಳ ಹಿತ್ತಿಲಿನಲ್ಲಿ ಮಾಂಸಕ್ಕಾಗಿ 150 ಹಸುಗಳನ್ನು ಕಟ್ಟಿ ಹಾಕಿರುವುದು ಕಂಡು ಬಂದಿತ್ತು. ಜತೆಗೆ ಎಲ್ಲ 11 ಆರೋಪಿಗಳ ಮನೆಗಳ ರೆಫ್ರಿಜರೇಟರ್ ಗಳಿಂದ ಹಸುವಿನ ಮಾಂಸವನ್ನು



ವಶಪಡಿಸಿಕೊಳ್ಳಲಾಗಿದೆ. ಪ್ರಾಣಿಗಳ ಕೊಬ್ಬು, ಜಾನುವಾರುಗಳ ಚರ್ಮ ಮತ್ತು ಮೂಳೆಗಳು ಸಹ ದಾಳಿ ವೇಳೆ ಕಂಡು ಬಂದಿದೆ. ಅವುಗಳನ್ನು ಕೋಣೆಯಲ್ಲಿ ತುಂಬಿಡಲಾಗಿತ್ತು ಎಂದು ಅವರು ಹೇಳಿದ್ದಾರೆ.

**ದೃಢಪಡಿಸಿದ ವೈದ್ಯರು:** ದಾಳಿ ವೇಳೆ ಪತ್ತೆಯಾಗಿರುವುದು ಗೋಮಾಂಸ ಎನ್ನುವುದನ್ನು ಸ್ಥಳೀಯ ಸರ್ಕಾರಿ ಪಶುವೈದ್ಯರು ದೃಢಪಡಿಸಿದ್ದಾರೆ. ದ್ವಿತೀಯ ಡಿಎನ್‌ಎ ವಿಶ್ಲೇಷಣೆಗಾಗಿ ನಾವು ಮಾದರಿಗಳನ್ನು ಹೈದರಾಬಾದ್‌ಗೆ ಕಳುಹಿಸಿದ್ದೇವೆ. 11 ಆರೋಪಿಗಳ ಮನೆಗಳು ಸರ್ಕಾರಿ ಭೂಮಿಯಲ್ಲಿದ್ದ ಕಾರಣ ಅವುಗಳನ್ನು ನೆಲಸಮಗೊಳಿಸಲಾಗಿದೆ' ಎಂದು ರಜತ್ ಸಕ್ಲೇಚಾ ವಿವರಿಸಿದ್ದಾರೆ.

**10 ಆರೋಪಿಗಳಿಗಾಗಿ ಶೋಧ:**

ಹಸುಗಳು ಮತ್ತು ಗೋಮಾಂಸವನ್ನು ವಶಪಡಿಸಿಕೊಂಡ ನಂತರ ಶುಕ್ರವಾರ ರಾತ್ರಿ ಎಫ್‌ಐಆರ್ ದಾಖಲಿಸಲಾಗಿದ್ದು, ಆರೋಪಿಗಳ ಪೈಕಿ ಓರ್ವನನ್ನು ಬಂಧಿಸಲಾಗಿದೆ. ತಲೆಮರೆಸಿಕೊಂಡ ಉಳಿದ 10 ಆರೋಪಿಗಳಿಗಾಗಿ ಶೋಧ ಕಾರ್ಯ ಆರಂಭಿಸಲಾಗಿದೆ.

**ಗೋಶಾಲೆಗೆ ರವಾನೆ:** 'ದಾಳಿ ವೇಳೆ ಪತ್ತೆಯಾದ 150 ಹಸುಗಳನ್ನು ಗೋಶಾಲೆಗೆ ಕಳುಹಿಸಲಾಗಿದೆ. ಭೈನ್ವಾಹಿ ಪ್ರದೇಶವು ಕೆಲವು ಸಮಯದಿಂದ ಹಸು ಕಳ್ಳ ಸಾಗಾಣಿಕೆಯ ಕೇಂದ್ರವಾಗಿ ಮಾರ್ಪಟ್ಟಿದೆ. ಮಧ್ಯ ಪ್ರದೇಶದಲ್ಲಿ ಗೋ ಹತ್ಯೆಯನ್ನು ನಿಷೇಧಿಸಲಾಗಿದ್ದು, ಇಂತಹ ಕೃತ್ಯ ಎಸಗಿದರೆ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಬಹುದಾದ ಕಾನೂನು ಇದೆ ಎಂದು ಎಸ್‌ಪಿ ರಜ-ತ್ ಸಕ್ಲೇಚಾ ಹೇಳಿದ್ದಾರೆ. ಅಪರಾಧಿಗಳ ಪೈಕಿ ಇಬ್ಬರ ಅಪರಾಧ ಹಿನ್ನೆಲೆಯನ್ನು ಸಂಗ್ರಹಿಸಲಾಗಿದೆ ಮತ್ತು ಉಳಿದ ವ್ಯಕ್ತಿಗಳ ಪೂರ್ವಾಪರಗಳ ಬಗ್ಗೆ ಕಂಡುಹಿಡಿಯುವ ಪ್ರಕ್ರಿಯೆ ನಡೆ-ಯುತ್ತಿದೆ ಎಂದೂ ಅವರು ವಿವರಿಸಿದ್ದಾರೆ. ಎಲ್ಲ ಆರೋಪಿಗಳು ಮುಸ್ಲಿಮರು ಎಂದು ಪೊಲೀಸರು ತಿಳಿಸಿದ್ದಾರೆ.

# ಕೊಡಗಿನಲ್ಲಿ ಮುಂಗಾರು ಮಳೆ: ಮಂಜಿನ ಮಧ್ಯೆ ಪ್ರವಾಸಿಗರಿಗೆ ಹೊಸ ಲೋಕ ತೆರೆದಿಟ್ಟ ಮಡಿಕೇರಿ


ಮಡಿಕೇರಿ: ಮಳೆಗಾಲದಲ್ಲಿ ಮಡಿಕೇರಿ ಪ್ರವಾಸ ತೆರಳುವುದು ಕಷ್ಟ ಅಂತ ಅಂದುಕೊಂಡರೆ ಅದು ನಿಮ್ಮ ತಪ್ಪು ಕಲ್ಪನೆ. ಯಾಕಂದರೆ ಮಳೆಗಾಲದ ಹಸಿರ ಸಿರಿಯಲ್ಲಿ ಮುಖಕ್ಕೆ ಮುತ್ತಿಕ್ಕುವ ಮಂಜಿನ ರಾಶಿಯಲ್ಲಿ ಪ್ರಕೃತಿಯ ಸೊಬಗನ್ನು ಆಸ್ವಾದಿಸುವುದೇ ಒಂದು ಚೆಂದ. ಸದ್ಯ ಮಡಿಕೇರಿಯಲ್ಲಿ ಮಳೆಗಾಲ ಆರಂಭವಾಗಿದ್ದು ಮಂಜಿನ ಮೆರವಣಿಗೆ ಮಧ್ಯೆ



ಪ್ರವಾಸಿಗರಿಗೆ ಹೊಸ ಲೋಕ ತೆರೆದಿಟ್ಟಿದೆ.

ಎಲ್ಲಿ ನೋಡಿದರೂ ದಟ್ಟ ಮಂಜು. ಹತ್ತಿರದ ಜಾಗವೂ ಕಾಣಿಸದಷ್ಟು ದಟ್ಟ ಮಂಜು. ಇಂಥ ಮಂಜಿನ ರಾಶಿಯಲ್ಲಿ ತುಂತುರು ಮಳೆಯಲ್ಲಿ ಚುಮು ಚುಮು ಚಳಿಯಲ್ಲಿ ಕೊಡೆ ಹಿಡಿದು ಜತೆ ಜತೆ ಜತೆಯಾಗಿ ಹೆಜ್ಜೆ ಹಾಕುತ್ತಾ ಇರುವ ಪ್ರವಾಸಿಗರು. ಈ ದೃಶ್ಯಗಳೀಗ ಮಡಿಕೇರಿಯಲ್ಲಿ ಸಾಮಾನ್ಯವಾಗಿದೆ.

ಎಲ್ಲಿ ನೋಡಿದರೂ ದಟ್ಟ ಮಂಜು. ಹತ್ತಿರದ ಜಾಗವೂ ಕಾಣಿಸದಷ್ಟು ದಟ್ಟ ಮಂಜು. ಇಂಥ ಮಂಜಿನ ರಾಶಿಯಲ್ಲಿ ತುಂತುರು ಮಳೆಯಲ್ಲಿ ಚುಮು ಚುಮು ಚಳಿಯಲ್ಲಿ ಕೊಡೆ ಹಿಡಿದು ಜತೆ ಜತೆ ಜತೆಯಾಗಿ ಹೆಜ್ಜೆ ಹಾಕುತ್ತಾ ಇರುವ ಪ್ರವಾಸಿಗರು. ಈ ದೃಶ್ಯಗಳೀಗ ಮಡಿಕೇರಿಯಲ್ಲಿ



ಸಾಮಾನ್ಯವಾಗಿದೆ.

ವಿಶೇಷವಾಗಿ ಮಡಿಕೇರಿ ರಾಜಸೀಟ್‌ನಲ್ಲಿ ಮಂಜಿನ ಮೆರವಣಿಗೆಯೇ ನಡೆಯುತ್ತಿದೆ. ಬೆಟ್ಟದ ತುತ್ತ ತುದಿಯಲ್ಲಿರೋ ರಾಜಾಸೀಟ್‌ನಲ್ಲಿ ಪ್ರವಾಸಿಗರು, ಪ್ರೇಮಿಗಳು, ಹುಡಗರು ಹುಡುಗಿಯರು ಹೀಗೆ ಎಲ್ಲರೂ ಕಚಗುಳಿ ಇಡೋ ಮಂಜಿನ ಮಧ್ಯೆ ಸೆಲ್ಫಿ ತೆಗೆಯುತ್ತಾ ಮನಸಾರೆ ಎಂಜಾಯ್ ಮಾಡುತ್ತಿದ್ದಾರೆ.

ಇದೀಗ ಜೂನ್ ತಿಂಗಳಾಗಿರೋದರಿಂದ ಆಗಾಗ್ಗೆ ಜಿಟಿಪಿಟಿ ಮಳೆಯ ಸಿಂಚನವೂ ಇರುತ್ತದೆ.

ವಿಶೇಷವಾಗಿ ಮಡಿಕೇರಿ ರಾಜಸೀಟ್‌ನಲ್ಲಿ ಮಂಜಿನ ಮೆರವಣಿಗೆಯೇ ನಡೆಯುತ್ತಿದೆ.


ಬೆಟ್ಟದ ತುತ್ತ ತುದಿಯಲ್ಲಿರೋ ರಾಜಾಸೀಟ್‌ನಲ್ಲಿ ಪ್ರವಾಸಿಗರು, ಪ್ರೇಮಿಗಳು, ಹುಡಗರು ಹುಡುಗಿಯರು ಹೀಗೆ ಎಲ್ಲರೂ ಕಚಗುಳಿ ಇಡೋ ಮಂಜಿನ ಮಧ್ಯೆ ಸೆಲ್ಫಿ ತೆಗೆಯುತ್ತಾ ಮನಸಾರೆ ಎಂಜಾಯ್ ಮಾಡುತ್ತಿದ್ದಾರೆ. ಇದೀಗ ಜೂನ್ ತಿಂಗಳಾಗಿರೋದರಿಂದ ಆಗಾಗ್ಗೆ ಜಿಟಿಪಿಟಿ ಮಳೆಯ ಸಿಂಚನವೂ ಇರುತ್ತದೆ.

ಮಡಿಕೇರಿ ಮಾತ್ರವಲ್ಲದೆ ಜೀವನದಿ ಕಾವೇರಿಯ ಹುಟ್ಟೂರು ತಲಕಾವೇರಿಯ ಬೆಟ್ಟ ಗುಡ್ಡಗಳಲ್ಲಿ ಮಂಜಿನ ರಾಶಿಯೇ ಿದೆ. ಇದು ಇಲ್ಲಿಗೆ ಆಗಮಿಸುವ ಪ್ರವಾಸಿಗರ ಭಕ್ತಿಯ ಪರಾಕಾಷ್ಟೆಯನ್ನೂ ಹೆಚ್ಚಿಸುತ್ತದೆ. ಇತ್ತ ರಾಜೀಸೀಟ್ ನಲ್ಲಿ ಇತ್ತೀಚೆಗೆ ಮೈ ನವಿರೇಳಿಸುವ ಜಿಪ್ ಲೈನ್ ಆರಂಭಿಸಲಾಗಿದೆ. ಬೆಟ್ಟದ ತುತ್ತ ತುದಿಯಲ್ಲಿ ಮಂಜು ಮುಸುಜಿದ ವಾತಾವರಣದಲ್ಲಿ ಜಿಪ್ ಲೈನ್‌ನಲ್ಲಿ ಸಾಗುವುದೇ



ಜನರಿಗೆ ರೋಚಕ ಅನುಭವ.

ಮಡಿಕೇರಿ ಮಾತ್ರವಲ್ಲದೆ ಜೀವನದಿ ಕಾವೇರಿಯ ಹುಟ್ಟೂರು ತಲಕಾವೇರಿಯ ಬೆಟ್ಟ ಗುಡ್ಡಗಳಲ್ಲಿ ಮಂಜಿನ ರಾಶಿಯೇ ಿದೆ. ಇದು ಇಲ್ಲಿಗೆ ಆಗಮಿಸುವ ಪ್ರವಾಸಿಗರ ಭಕ್ತಿಯ ಪರಾಕಾಷ್ಟೆಯನ್ನೂ ಹೆಚ್ಚಿಸುತ್ತದೆ. ಇತ್ತ ರಾಜೀಸೀಟ್ ನಲ್ಲಿ ಇತ್ತೀಚೆಗೆ ಮೈ ನವಿರೇಳಿಸುವ ಜಿಪ್ ಲೈನ್ ಆರಂಭಿಸಲಾಗಿದೆ. ಬೆಟ್ಟದ ತುತ್ತ ತುದಿಯಲ್ಲಿ ಮಂಜು ಮುಸುಜಿದ ವಾತಾವರಣದಲ್ಲಿ ಜಿಪ್ ಲೈನ್‌ನಲ್ಲಿ ಸಾಗುವುದೇ ಜನರಿಗೆ ರೋಚಕ ಅನುಭವ.



ಹೇಳಿ ಕೇಳಿ ರಾಜಾಸೀಟ್ ಬೆಟ್ಟದ ಮೇಲೆ ಇರುವುದರಿಂದ ವೀವ್ ಪಾಯಿಂಟ್‌ನಲ್ಲಿ ನಿಂತು ಸುತ್ತಲ ಪಶ್ಚಿಮ ಘಟ್ಟದ ರುದ್ರ ರಮಣೀಯ ಸೌದರ್ಯವನ್ನ ಆಸ್ವಾದಿಸಬಹುದು. ಸ್ವಚ್ಛ ಪರಿಸರ ಮೇಲೆ ಬೃಹತ್ ಹಡಗು ತೇಲಿ ಬಂದಂತೆ ಭಾಸವಾಗುವ ಮಂಜಿನ ರಾಶಿ ಪ್ರವಾಸಿಗರನ್ನ ಬೇರೆಯದ್ದೇ ಲೋಕಕ್ಕೆ ಕರೆದೊಯ್ಯುತ್ತದೆ. ಒಂದೆಡೆ ಮಳೆ , ಮಂಜು, ಪ್ರಕೃತಿ ಅದರ ಮಧ್ಯೆ ಸಾಹಸ ಚಟುವಟಿಕೆ ಎಲ್ಲಾ ಸೇರಿ ಪ್ರವಾಸಿಗರಿಗೆ ಹೊಸ ಲೋಕವನ್ನೇ ತೆರೆದಿಟ್ಟಿದೆ.

ಹೇಳಿ ಕೇಳಿ ರಾಜಾಸೀಟ್ ಬೆಟ್ಟದ ಮೇಲೆ ಇರುವುದರಿಂದ ವೀವ್ ಪಾಯಿಂಟ್‌ನಲ್ಲಿ ನಿಂತು ಸುತ್ತಲ ಪಶ್ಚಿಮ ಘಟ್ಟದ ರುದ್ರ ರಮಣೀಯ ಸೌದರ್ಯವನ್ನ ಆಸ್ವಾದಿಸಬಹುದು. ಸ್ವಚ್ಛ ಪರಿಸರ ಮೇಲೆ ಬೃಹತ್ ಹಡಗು ತೇಲಿ ಬಂದಂತೆ ಭಾಸವಾಗುವ ಮಂಜಿನ ರಾಶಿ ಪ್ರವಾಸಿಗರನ್ನ ಬೇರೆಯದ್ದೇ ಲೋಕಕ್ಕೆ ಕರೆದೊಯ್ಯುತ್ತದೆ.

ಒಂದೆಡೆ ಮಳೆ , ಮಂಜು, ಪ್ರಕೃತಿ ಅದರ ಮಧ್ಯೆ ಸಾಹಸ ಚಟುವಟಿಕೆ ಎಲ್ಲಾ ಸೇರಿ ಪ್ರವಾಸಿಗರಿಗೆ ಹೊಸ ಲೋಕವನ್ನೇ ತೆರೆದಿಟ್ಟಿದೆ.

ಒಟ್ಟಿನಲ್ಲಿ ಈ ತರಹ ಮಂಜು ಮಳೆಯನ್ನ ಆಸ್ವಾದಿಸಬೇಕು ಅಂದರೆ ಬಹುಶಃ ಈದು ಪರಿಪಕ್ವ ಸಮಯ. ಮಳೆಯೂ ಕಡಿಮೆ ಇದೆ. ಇನ್ನು ಜುಲೈ ಆಗಸ್ಟ್ ಬಂತೆಂದರೆ ರಣ ಮಳೆ ಶುರುವಾಗುತ್ತದೆ. ಆಗ ಪ್ರವಾಸವನ್ನು ಎಂಜಾಯ್ ಮಾಡುವುದು ಕಷ್ಟ. ಹಾಗಾಗಿ ಸದ್ಯ ಕೊಡಗು ಜಿಲ್ಲೆ ಪ್ರವಾಸಕ್ಕೆ ಸೂಕ್ತ ಸಮಯವಾಗಿದೆ.

ಒಟ್ಟಿನಲ್ಲಿ ಈ ತರಹ ಮಂಜು ಮಳೆಯನ್ನ ಆಸ್ವಾದಿಸಬೇಕು ಅಂದರೆ ಬಹುಶಃ ಈದು ಪರಿಪಕ್ವ ಸಮಯ. ಮಳೆಯೂ ಕಡಿಮೆ ಇದೆ. ಇನ್ನು ಜುಲೈ ಆಗಸ್ಟ್ ಬಂತೆಂದರೆ ರಣ ಮಳೆ ಶುರುವಾಗುತ್ತದೆ. ಆಗ ಪ್ರವಾಸವನ್ನು ಎಂಜಾಯ್ ಮಾಡುವುದು ಕಷ್ಟ. ಹಾಗಾಗಿ ಸದ್ಯ ಕೊಡಗು ಜಿಲ್ಲೆ ಪ್ರವಾಸಕ್ಕೆ ಸೂಕ್ತ ಸಮಯವಾಗಿದೆ.

# ಬಾಣಂತಿಯರಿಗೆ ಆರೈಕೆ: ಮನೆಮದ್ದು

1. ಬಾಣಂತಿಯರಿಗೆ ಹುರುಳಿಸಾರು ಕೊಡುವುದರಿಂದ ಗರ್ಭಾಶಯದ ನೋವು ಕಡಿಮೆ ಆಗಿ ಸೋಂಕು ಬರದಂತೆ ಕಾಪಾಡುತ್ತದೆ. ಉತ್ತಮ ಪೌಷ್ಠಿಕಾಂಶವೂ ಮಗುವಿಗೆ ದೊ-ರೆತಂತೆ ಆಗುತ್ತದೆ.

2, ಎಲ್ಲಾ ಬಗೆಯ ಸಬ್ಬಸ್ಸಿಗೆ, ಪಾಲಕ್, ಹೊನೆಗೊನೆ, ಬಸಳೆ, ಅಗಸೆ, ಕೊತ್ತಂಬರಿ, ಕರಿಬೇವು ಸೊಪ್ಪು, ಬೆಳ್ಳುಳ್ಳಿ, ಕ್ಯಾರೆಟ್, ಸೋರೆಕಾಯಿ, ಬೀಟ್‌ರೋಟ್, ಸುವರ್ಣಗೆಡ್ಡೆ, ನುಗ್ಗೆಕಾಯಿ ಈ ರೀತಿ ತರಕಾರಿ ಹಾಗೂ ಸೇಬುಹಣ್ಣು, ಪಪ್ಪಾಯಿ, ಸಪೋಟ, ಮಾವಿನಹಣ್ಣು ಇತ್ಯಾದಿ ಹಣ್ಣುಗಳನ್ನು ಬಾಣಂತಿಯರು ಸೇವಿಸಬಹುದು.

3. ಅಂಟಿನ ಉಂಡೆಯನ್ನು ಕೊಡುವುದು ಹಿಂದಿನಿಂದ ಬಂದ ಪದ್ಧತಿ. ಇದು ಈ ಸಮಯದಲ್ಲಿ ಅತ್ಯಂತ ಶ್ರೇಷ್ಠವಾದದ್ದು, ಇದು ಪೌಷ್ಠಿಕಕರವಾದದ್ದು, ರುಚಿಕರವಾದದ್ದು. ಇದ-ಕ್ಕೆ ಬೇಕಾಗುವ ಪದಾರ್ಥಗಳೆಂದರೆ, ಒಣಕೊಬ್ಬರಿತುರಿ, ಖರ್ಜೂರ, ಗಸಗಸೆ, ಲವಂಗ, ಬಿಳಿಗೋಂದು, ಬೆಲ್ಲ ಕರಗಿಸಿ ಅದರಲ್ಲಿ ಹಾಕಿ ಚೆನ್ನಾಗಿ ಕಲಸಿ ಉಂಡೆಗಳನ್ನಾಗಿ



ಮಾಡಿಟ್ಟುಕೊಂಡು ಬಾಣಂತಿಯರಿಗೆ ಕೊಡಬೇಕು.

4. ಪ್ರಸವಾ ನಂತರದಲ್ಲಿ ಹುರುಳಿಯನ್ನು ಚೆನ್ನಾಗಿ ಬೇಯಿಸಿ ಕೇವಲ ಆ ಕಟ್ಟಿಗೆ ಚಿಟಿಕೆ ಉಪ್ಪು, ಚಿಟಿಕೆ ಕಾಳು ಮೆಣಸಿನಪುಡಿ ಸೇರಿಸಿ, ಕುಡಿಯಲಿಕ್ಕೆ ಕೊಟ್ಟರೆ ಅಂತರ್ಮಲವು ಸಂಪೂರ್ಣವಾಗಿ ಹೊರಕ್ಕೆ ಬಂದು ಗರ್ಭಾಶಯದ ನೋವು ಕಡಿಮೆಯಾಗುತ್ತದೆ.

5. ಶುಂಠಿಯ ಪುಡಿಯನ್ನು ಬೆಲ್ಲ ಮತ್ತು ತುಪ್ಪದಲ್ಲಿ ಕಲಸಿ ಉಂಡೆಗಳಾಗಿ ಮಾಡಿಟ್ಟುಕೊಂಡು ದಿನಬಿಟ್ಟುದಿನ ಬೆಳಿಗ್ಗೆ ತಿಂಡಿಗೆ ಮುಂಚೆ ಸೇವಿಸುತ್ತಾ ಬಂದರೆ ಶರೀರದಲ್ಲಿ ವಾಯು ಶೇಖರಣೆಯಾಗಲ್ಲ ಹಾಗೂ ನೀರಿನ ಅಂಶ ಇಂಗಲು ಸಹಾಯವಾಗುತ್ತದೆ.

6. ಬಾಣಂತಿಯರಿಗೆ ರಕ್ತಸ್ರಾವ ಅಧಿಕವಾದರೆ ರಸಬಾಳೆ ಗಿಡದ ಗೆಡ್ಡೆಯನ್ನು ತಂದು 1 ಚಮಚ ಜೀರಿಗೆ, 1 ಚಮಚ ಕೊತ್ತಂಬರಿ ಬೀಜ, 4 5 ಲವಂಗ ಎಲ್ಲವನ್ನೂ ಸೇರಿಸಿ ನೀರಿನಲ್ಲಿ ಹಾಕಿ ಕುದಿಸಿ, ಶೋಧಿಸಿ, ಸ್ವಲ್ಪಸ್ವಲ್ಪ ಸೇವಿಸುತ್ತಾ ಇರಬೇಕು.

7. ಬಾಣಂತಿಯರ ಜ್ವರಕ್ಕೆ: ಮಗುವಿಗೆ ಹಾಲು ಕುಡಿಸುವುದರಿಂದ, ಬೇರೆ ಔಷಧಿ ಸೇವನೆ ಬದಲಿಗೆ ಆಡಿನ ಹಾಲಿಗೆ ಶುಂಠಿ ಪುಡಿಯನ್ನು ಹಾಕಿ ಕುದಿಸಿ ಶೋಧಿಸಿಕೊಂಡು ಸಕ್ಕರೆ ಹಾಕಿ ಕುಡಿಯುವುದರಿಂದ ಬಾಣಂತಿಯರ ಜ್ವರ ಗುಣವಾಗುತ್ತದೆ.

8. ಎದೆಹಾಲು ಹೆಚ್ಚಲು: ಪ್ರಸವಾನಂತರ 4 5 ಲವಂಗದ ತುಣುಕುಗಳನ್ನು ಜಜ್ಜಿ ನೀರಿನಲ್ಲಿ ಹಾಕಿ ಚೆನ್ನಾಗಿ ಕುದಿಸಿ 2 ಚಮಚದಷ್ಟು ಕಷಾಯಕ್ಕೆ 1 ಚಿಟಿಕೆ ಇಂಗನ್ನು ಹಾಕಿ ಕುಡಿಯುತ್ತಾ ಬರಬೇಕು. ಇದರಿಂದ ಎದೆಹಾಲು ಉತ್ಪತ್ತಿ ಜಾಸ್ತಿ ಆಗುತ್ತದೆ.

9. ಎಳೆಯದಾದ ಮುಸುಕಿನ ಜೋಳದ ಕಾಳುಗಳನ್ನು ಒಣಗಿಸಿ ಪುಡಿಮಾಡಿಟ್ಟುಕೊಂಡು ಇದನ್ನು ಪ್ರತಿನಿತ್ಯ 1 ಚಮಚ ಪುಡಿಗೆ ಸ್ವಲ್ಪ ಕಲ್ಲುಸಕ್ಕರೆ ಪುಡಿಯನ್ನು ಸೇರಿಸಿ ಸೇವಿಸಿದರೆ ಹಾಲು ಉತ್ಪತ್ತಿ ಜಾಸ್ತಿಯಾಗುತ್ತದೆ.

10. ಹೊನೆಗೊನೆ ಸೊಪ್ಪಿನ ಪಲ್ಯ ಅಥವಾ ಸಬ್ಬಸ್ಸಿಗೆ ಸೊಪ್ಪಿನ ಪಲ್ಯ ಸೇವನೆಯೂ ಸಹ ಉತ್ತಮ ಸಹಕಾರಿ.

11. ಅಲಸಂದಿಕಾಯಿಯ ಪಲ್ಯವನ್ನು ಮಾಡಿ ಸೇವಿಸಿ (ಯಾವುದೇ ವಿಧವಾದ ಪಲ್ಯ ಮಾಡಿದರೂ ತುಪ್ಪದಲ್ಲಿ ಒಗ್ಗರಣೆ ಹಾಕಬೇಕು, ಎಣ್ಣೆ ಬಳಸಬಾರದು).

12. ಶುದ್ಧ ಅರಿಶಿನವನ್ನು ಮೈಗೆ ಹಚ್ಚಲು ಹಾಗೂ ಆಹಾರದ ಜೊತೆ ಹೆಚ್ಚಾಗಿ ಸೇವಿಸುವುದರಿಂದ ಯಾವುದೇ ರೀತಿಯ ಇನ್‌ಫೆಕ್ಷನ್ ಆಗಲ್ಲ ಹಾಗೂ ಮೈಯಲ್ಲಿನ ನೀರು ಇಂಗಲು ಸಹಾಯವಾಗುತ್ತದೆ.

13. ಕ್ಯಾಲ್ಸಿಯಂ ಕೊರತೆ ಶರೀರದಲ್ಲಿ ಜಾಸ್ತಿಯಾಗುವುದರಿಂದ ಹಾಲು ಹಾಗೂ ಹಸುವಿನ ತುಪ್ಪವನ್ನು ಹೆಚ್ಚಾಗಿ ಬಳಸಬೇಕು. ಮಗುವಿನ ಬೆಳವಣಿಗೆಗೆ ಸುಣ್ಣದ ಅವಶ್ಯಕತೆ ಜಾಸ್ತಿ ಇರುತ್ತದೆ.

14. ವೀಳ್ಯದೆಲೆ, ಅಡಿಕೆ, ಸುಣ್ಣ ಸೇರಿಸಿ ಹಾಕುವುದರಿಂದ ಮಗುವು ಹಾಲನ್ನು ಕಕ್ಕುವುದಿಲ್ಲ. ತಿಂದ ಆಹಾರ ಚೆನ್ನಾಗಿ ಜೀರ್ಣಿಸುತ್ತದೆ.

15. ಒಂದು ತಿಂಗಳ ನಂತರ ಬಾಣಂತಿಯರು ಸ್ವಲ್ಪ ವ್ಯಾಯಾಮವನ್ನು ಮಾಡಬೇಕು.

1. ಗೌರಮ್ಮನ ಆರೋಗ್ಯ ಸೂತ್ರಗಳು ಪ್ರಿಸ್ಮ್ ಬುಕ್ಸ್ ಪ್ರೈವೇಟ್ ಲಿಮಿಟೆಡ್ ವತಿಯಿಂದ ಪ್ರಕಟಣೆ

2. ಡಾ. ಗೌರಿ ಸುಬ್ರಮಣ್ಯ ಆಯುರ್ವೇದ ತಜ್ಞರು ಮತ್ತು ಧರ್ಮದರ್ಶಿಗಳು ಮುಕ್ತಿನಾಗ ದೇವಸ್ಥಾನ ಫೋನ್ ನಂ. 9535383921.

## ಒಂದನೇ ಪುಟದಿಂದ

# ಮತ್ತೊಂದು ಭ್ರೂಣಗಳ ಹತ್ಯೆ ಜಾಲ

ಜಾಲದಲ್ಲಿ ಯಾರೆಲ್ಲ ತೊಡಗಿಸಿಕೊಂಡಿದ್ದಾರೆ. ಫಾರ್ಮ್‌ಹೌಸ್ ಸೇರಿ ಇನ್ನೂ ಹಲವು ಪ್ರದೇಶಗಳಲ್ಲಿ ಭ್ರೂಣಗಳನ್ನು ಹೂಳಲಾಗಿದೆಯೇ ಎಂಬುದು ಸೇರಿ ಹತ್ತಾರು ಆಯಾಮಗಳಲ್ಲಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಮದುವೆಗೂ ಮುಂಚೆ ಗರ್ಭಿಣಿಯಾಗಿ ಮಗುವನ್ನು ಸಾಕಲಾಗದೆ ನರಳಾಡುವ ಅಸಹಾಯಕ ಯುವತಿಯರನ್ನು ಗುರಿಯಾಗಿಸಿಕೊಂಡು ನಕಲಿ ವೈದ್ಯ ನಕಲಿ ವೈದ್ಯ ಅಬ್ದುಲ್ ಗಫಾರ್ ಲಾಡಖಾನ್ ಆಪರೇಷನ್ ಮಾಡಿ ಮಗುವನ್ನು ತಾವೇ ಸಾಕುವುದಾಗಿ ಹೇಳಿ ಮಗುವನ್ನು ರಕ್ಷಿಸುತ್ತಿದ್ದರು. ಬಳಿಕ ಎರಡ್ಮೂರು ತಿಂಗಳು ಮಗು ಆರೈಕೆ ಮಾಡಿ ಮಗುವನ್ನು ಅಕ್ರಮವಾಗಿ ಮಾರಾಟ ಮಾಡಲಾಗುತ್ತಿತ್ತು.

ಮಕ್ಕಳಿಲ್ಲದವರಿಗೆ ಅರವತ್ತು ಸಾವಿರದಿಂದ ಒಂದೂವರೆ ಲಕ್ಷ ಹಣಕ್ಕೆ ಮಾರಾಟ ಮಾಡಲಾಗುತ್ತಿತ್ತು. ಈ ವಿಚಾರ ತಿಳಿದು ಮಕ್ಕಳ ಮಾರಾಟ ಗ್ಯಾಂಗ್ ಹಿಂದೆ ಬಿದ್ದಿದ್ದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸರ್ಕಾರಿ ಮತ್ತು ಕೇಂದ್ರ ಸಂಯೋಜಕರ ತಂಡ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದರು. ಮಕ್ಕಳ ಮಾರಾಟ ಮಾಡುತ್ತಿದ್ದ ಆರೋಪಿ ನಕಲಿ ವೈದ್ಯ ಅಬ್ದುಲ್ ಗಫಾರ್ ಲಾಡಖಾನ್ ಭ್ರೂಣ ಹತ್ಯೆ ಕೂಡ ಮಾಡಿರುವುದು ತನಿಖೆಯಲ್ಲಿ ತಿಳಿದುಬಂದಿತ್ತು.ಕೆಲ ದಿನಗಳ ಹಿಂದೆ ಬಾಗಲಕೋಟೆಯಲ್ಲೂ ಭ್ರೂಣ ಹತ್ಯೆ ಪ್ರಕರಣಗಳು ಬಯಲಾಗಿದ್ದವು.

# ನೀಟ್, ಸಮಗ್ರ ತನಿಖೆಗೆ ಒತ್ತಾಯ

ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆದ ನೀಟ್ ಪರೀಕ್ಷೆ ಅವ್ಯವಹಾರ ಪ್ರಕರಣಕ್ಕೆ ಸಂಬಂಧಿಸಿದಂತೆ ದೇಶದ ಹಲವು ಭಾಗಗಳಲ್ಲಿ ಪ್ರತಿ ಪಕ್ಷ ಕಾಂಗ್ರೆಸ್ ಸೇರಿದಂತೆ ಇಂಡಿಂ-ಯಾ ಮೈತ್ರಿಕೂಟದ ಹಲವು ಪಕ್ಷಗಳು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುವ ಮೂಲಕ ನೀಟ್ ಆಕಾಂಕ್ಷಿಗಳ ಪರ ಹೋರಾಟ ನಡೆಸಿದ್ದಾರೆ. ನೀಟ್ ಪರೀಕ್ಷೆ ಪರಿಚಯಿಸಿದ ದಿನದಿಂದಲೂ ನೀಟ್ ವಿರೋದಿಸುತ್ತಿರುವ ತಮಿಳುನಾಡಿನ ಆಡಳಿತಾರೂಢ ಡಿಎಂಕೆ ಕೇಂದ್ರ ಸರ್ಕಾರದ ವಿರುದ್ದ ನೇರ ವಾಗ್ದಾಳಿ ನಡೆಸುವ ಮೂಲಕ ಪರೀಕ್ಷೆಯ ಪಾವಿತ್ರ್ಯತೆ ನಾಶಪಡಿಸಲು ಹೊರಟಿದೆ ಎಂದು ಕಿಡಿಕಾರಿ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯನ್ನು ತರಾಟೆಗೆ ತೆಗೆದುಕೊಂಡಿದೆ.

ಮೇ 5 ರಂದು 24 ಲಕ್ಷ ವಿದ್ಯಾರ್ಥಿಗಳು ತೆಗೆದುಕೊಂಡಿದ್ದ ವೈದ್ಯಕೀಯ ಪ್ರವೇಶ ಪರೀಕ್ಷೆಯ ಫಲಿತಾಂಶಗಳನ್ನು ಜೂನ್ 4 ರಂದು ಲೋಕಸಭೆ ಚುನಾವಣೆಯ ಮತ ಎಣಿಕೆ ನಡೆದಾಗ ಪ್ರಕಟಿಸಲಾಯಿತು. ಫಲಿತಾಂಶದ ನಂತರ, ಪೇಪರ್ ಸೋರಿಕೆಯ ಆರೋಪ ಕೇಳಿಬಂದಿತ್ತು.. 67 ವಿದ್ಯಾರ್ಥಿಗಳು 720/720 ರಷ್ಟು ಪರಿಪೂರ್ಣ ಅಂಕ ಗಳಿಸಿ ಇದಕ್ಕೆ ಪ್ರಮುಖ ಕಾರಣ ಎನ್ನಲಾಗಿದೆ.

# ಸಿಕ್ಕ ಸ್ಥಾನಕ್ಕೆ ತೃಪ್ತಿ, ಸಚಿವರ ಇಂಗಿತ

ಸೃಷ್ಟಿಸುವಂತೆ ಒತ್ತಡಗಳು ಇದ್ದವು ಎಂದಿದ್ದಾರೆ.

**ಸಿಕ್ಕ ಸಾನಕ್ಕೆ ತೃಪ್ತಿ ಪಡೋಣ**

ಉಪಮುಖ್ಯಮಂತ್ರಿ ಹುದ್ದೆ ಸೃಷ್ಟಿ ವಿಚಾರ ಪಕ್ಷದ ವೇದಿಕೆಯಲ್ಲಿ ಚರ್ಚೆಯಾಗಬೇಕು. ಇದು ಸಾರ್ವಜನಿಕವಾಗಿ ಬಹಳ ಮಹತ್ವದ ವಿಷಯವಲ್ಲ. ಎಷ್ಟು ಜನರನ್ನು ಉಪಮುಖ್ಯಮಂತ್ರಿ ಮಾಡಬೇಕು ಎಂಬುದನ್ನು ಪಕ್ಷ ನಿರ್ಧರಿಸುತ್ತದೆ. ಸಿಕ್ಕ ಸ್ಥಾನಕ್ಕೆ ತೃಪ್ತಿ ಪಡೋಣ ಡಿಸಿಎಂ ಆಗಬೇಕು ಎನ್ನುವವರು ಪಕ್ಷದಲ್ಲಿ ಯಾರನ್ನು ಭೇಟಿ ಯಾಗಬೇಕು ಅವರನ್ನು ಭೇಟಿಯಾಗಿ ಅಲ್ಲಿ ಕೇಳಿಕೊಳ್ಳಬೇಕು. ಸಾರ್ವಜನಿಕವಾಗಿ ಚರ್ಚೆ ಮಾಡುವಂತದಲ್ಲ ಎಂದು ಹೇಳುವ ಮೂಲಕ ಡಿಸಿಎಂ ಹುದ್ದೆ ಸೃಷ್ಟಿ ಬಗ್ಗೆ ನಡೆದಿರುವ ಬಹಿರಂಗ ಚರ್ಚೆಗೆ ಅಸಮಾಧಾನ ಹೊರ ಹಾಕಿದ್ದಾರೆ.

ನೀವು ಡಿಸಿಎಂ ಆಕಾಂಕ್ಷಿ ಎಂಬ ಪ್ರಶ್ನೆಗೆ ನಾನು ಉಪಮುಖ್ಯಮಂತ್ರಿಯಾಗಬೇಕೆಂದಿದ್ದರೆ ಯಾರ ಹತ್ತಿರ ಮಾತನಾಡಬೇಕೋ ಅವರ ಹತ್ತಿರ ಮಾತನಾಡುತ್ತೇನೆ. ನಿಮ್ಮ ಹತ್ತಿರ (ಮಾಧ್ಯಮ) ಮಾತನಾಡಿದರೆ ನೀವು ಡಿಸಿಎಂ ಮಾಡುತ್ತೀರಾ ಎಂದು ಹಾಸ್ಯದ ದಾಟಿಯಲ್ಲಿ ಹೇಳಿದರು. ಅರ್ಹತೆಗಿಂತ ನಮಗೆ ಹೆಚ್ಚು ಅವಕಾಶ ಸಿಕ್ಕಿದೆ. ನಾಲ್ಕು ಜನರಿಗೆ ಸಹಾಯ ಮಾಡುವ ಕೆಲಸ ಮಾಡೋಣ ಎಂದು ಮಾರ್ಮಿಕವಾಗಿ ಹೇಳಿದರು.

# ಕರ್ನಾಟಕದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ

ಇಂಧನ ಬೆಲೆಯು ಇತರ ಹಲವು ರಾಜ್ಯಗಳಿಗಿಂತ ಕಡಿಮೆಯಾಗಿದೆ ಎಂದು ರಾಜ್ಯ ಕೈಗಾರಿಕಾ ಸಚಿವ ಎಂಬಿ ಪಾಟೀಲ್ ಶನಿವಾರ ಹೇಳಿದ್ದರು.

'ರಾಹುಲ್ ಗಾಂಧಿಯವರ 'ಗ್ಯಾರಂಟಿ'ಗಳಿಗೆ ಹಣ ನೀಡಲು ಇಂಧನ ಬೆಲೆ ಏರಿಕೆ ಅನಿವಾರ್ಯವಾಗಿದೆ ಎಂದು ಕರ್ನಾಟಕದ ಕೈಗಾರಿಕಾ ಮತ್ತು ಅಭಿವೃದ್ಧಿ ಸಚಿವ ಎಂಬಿ ಪಾಟೀಲ್ ಹೇಳಿದ್ದಾರೆ. ರಾಹುಲ್ ಗಾಂಧಿ ಕೈ ಹಾಕಿದ ಪ್ರತಿಯೊಂದು ರಾಜ್ಯವನ್ನು ಹಾಳುಮಾಡಿದ್ದಾರೆ' ಎಂದು ಮಾಳವೀಯ ಹೇಳಿದ್ದಾರೆ.

'ಲೋಕಸಭಾ ಚುನಾವಣೆಯಲ್ಲಿ ಹೀನಾಯ ಸೋಲು ಕಂಡಿದ್ದರಿಂದ ಕರ್ನಾಟಕ ಕಾಂಗ್ರೆಸ್‌ನಲ್ಲಿ ಅಸಮಾಧಾನ ಭುಗಿಲೆದ್ದಿದೆ. ಈ ಹಿಂದೆ ಡಿಕೆ ಶಿವಕುಮಾರ್ ಬಣ ಒಂದೆಡೆಯಾದರೆ, ಬಿಎಸ್ ಯಡಿಯೂರಪ್ಪ ಅವರನ್ನು ಗುರಿಯಾಗಿಸಿದ್ದಕ್ಕಾಗಿ ಈಗ ಕಾಂಗ್ರೆಸ್‌ನಲ್ಲಿರುವ ಲಿಂಗಾಯತರೂ ಅಸಮಾಧಾನಗೊಂಡಿದ್ದಾರೆ' ಎಂದಿದ್ದಾರೆ.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಕರ್ನಾಟಕ ಸರ್ಕಾರದೊಳಗಿನ ಅಸ್ಥಿರತೆಯ ಬಗ್ಗೆ ಗಮನಹರಿಸಬೇಕು. ಕರ್ನಾಟಕದಲ್ಲಿ ಸದ್ಯದ ಸರ್ಕಾರವು ಗಮನಾರ್ಹ ಸವಾಲುಗಳು ಅಥವಾ ಬೆದರಿಕೆಗಳನ್ನು ಎದುರಿಸುತ್ತಿದೆ. ಮುಂದಿನ ದಿನಗಳಲ್ಲಿ ಅದರ ಅವನತಿಗೆ ಕಾರಣವಾಗಬಹುದು ಎಂದು ಸಲಹೆ ನೀಡಿದರು.

ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಚಿಲ್ಲರೆ ಮಾರಾಟ ತೆರಿಗೆ (ಖಜಣಚುಟ ಖಚಿಟಞ ಖಿಚಿಥ) ಹೆಚ್ಚಳ ಮಾಡಿದ್ದು, ಇದರಿಂದಾಗಿ ಲೀಟರ್ ಪೆಟ್ರೋಲ್ ಬೆಲೆ 3 ರೂ. ಮತ್ತು ಡೀಸೆಲ್ ಬೆಲೆ 3.50 ರೂ. ಏರಿಕೆಯಾಗಿದೆ. ಹೊಸ ದರಗಳು ತಕ್ಷಣವೇ ಜಾರಿಗೆ ಬಂದಿದೆ.

# ಭವಿಷ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉಸಿರಾಡುವುದಕ್ಕೂ ತೆರಿಗೆ ವಿಧಿಸಿದರೂ ಆಶ್ಚರ್ಯವಿಲ್ಲ; ಬಿಜೆಪಿ ಲೇವಡಿ

ಧೂಮಕೇತುವಿನ ರೀತಿ ಜನಸಾಮಾನ್ಯರ ಮೇಲೆ ಎರಗಿದೆ.

ಈ ಹಿಂದೆ ಕೇಂದ್ರ ಸರ್ಕಾರದ ವಿರುದ್ಧ ಇಂಧನ ದರ ಇಳಿಕೆಗಾಗಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತ್ತು. ಆದರೆ, ಬಿಜೆಪಿ ಆಡಳಿತದಲ್ಲಿರುವ ರಾಜ್ಯಗಳಲ್ಲಿ ಪೆಟ್ರೋಲ್ ಸೆಸ್ ಇಳಿಕೆ ಮಾಡಿದರೂ ಕರ್ನಾಟಕ ಸರ್ಕಾರ ಮಾತ್ರ ತೆಪ್ಪಗಿತ್ತು. ಬಜೆಟ್ ಗೆ ಮುನ್ನವೇ ಪೆಟ್ರೋಲಿಯಂ ಉತ್ಪನಗಳ ಮೇಲಿನ ಸೆಸ್ ಏರಿಕೆ ಮಾಡಲಾಗಿದೆ. ಭವಿಷ್ಯದಲ್ಲಿ ಕಾಂಗ್ರೆಸ್ ಸರ್ಕಾರ ಉಸಿರಾಡುವುದಕ್ಕೂ ತೆರಿಗೆ ಹಾಕುವುದು ಗ್ಯಾರಂಟಿ ಎಂದು ಲೇವಡಿ ಮಾಡಿದರು.

ವೈದ್ಯ ಶಿಕ್ಷಣ ಸೇರಿದಂತೆ ವೃತ್ತಿ ಶಿಕ್ಷಣ ಶುಲ್ಕವನ್ನು ಶೇ.10ರಷ್ಟು ಏರಿಕೆ ಮಾಡಿದ್ದ ಸರ್ಕಾರ ಪೆಟ್ರೋಲಿಗೆ ಬೆಂಕಿ ಹಚ್ಚಿದೆ. ಸರ್ಕಾರದ ಈ ನಿರ್ಧಾರದ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದು ಅನಿವಾರ್ಯ ಎಂದು ಎಚ್ಚರಿಸಿದ್ದಾರೆ.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಬೆಲೆ ಏರಿಕೆಯನ್ನು ಜನವಿರೋಧಿ ಎಂದು ಖಂಡಿಸಿದ್ದು, ಇಂಧನ ಏರಿಕೆಯನ್ನು ಹಿಂಪಡೆಯದಿದ್ದರೆ ಸೋಮವಾರ ರಾಜ್ಯಾದ್ಯಂತ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಎಲ್ಲ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಇದಕ್ಕೆ ಹೆಚ್ಚುವರಿಯಾಗಿ ಇಂಧನ ಬೆಲೆಯನ್ನೂ ಏರಿಕೆ ಮಾಡಿ, ಜನರ ಜೇಬಿಗೆ ಕತ್ತರಿ ಹಾಕಲಾಗುತ್ತಿದೆ. ಇದು ನಿಜಕ್ಕೂ ದುರದೃಷ್ಟಕರ ಸಂಗತಿ. ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲು ಐದು ಗ್ಯಾರಂಟಿ ಯೋಜನೆಗಳ ಮೂಲಕ ಜನರನ್ನು ಮೂರ್ಖರನ್ನಾಗಿಸಿದೆ ಎಂದರು. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಬಿಜೆಪಿಗೆ ಮತ ಹಾಕಿದ್ದರಿಂದ ಕಾಂಗ್ರೆಸ್ ಸರ್ಕಾರ ಜನರ ವಿರುದ್ಧ ಸೇಡು ತೀರಿಸಿಕೊಳ್ಳುತ್ತಿದೆ ಎಂದರು. ಸಿದ್ದರಾಮಯ್ಯ ಸರಕಾರ ಅವೈಜ್ಞಾನಿಕ ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರಕಾರದ ಬೊಕ್ಕಸವನ್ನು ಖಾಲಿ ಮಾಡಿದೆ ಸಿದ್ದರಾಮಯ್ಯನವರು ಕನ್ನಡಿಗರಿಗೆ ತೆರಿಗೆ ವಿಧಿಸಿ ಖಜಾನೆ ತುಂಬುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

# ಚಕ್ರಗಳ ಮೇಲೆ ಆರೋಗ್ಯ ತಪಾಸಣೆಗೆ ಚಾಲನೆ

ಸಂಘಗಳು ಮತ್ತು ಹೆಚ್ಚಿನವುಗಳಿಗೆ ತಲುಪಿಸಲು ವಿನ್ಯಾಸಗೊಳಿಸಲಾಗಿದೆ.

ಜೂನ್ 15 ರಂದು ಬೆಂಗಳೂರಿನ ಆರೋಗ್ಯ ಸೌಧದಲ್ಲಿ ಅಪೋಲೊ ಹೆಲ್ತ್ ಚೆಕ್ ಆನ್ ವೀಲ್ಸ್ ಕಾರ್ಯಕ್ರಮವನ್ನು ಹಲವು ಪ್ರಮುಖ ಗಣ್ಯರ ಸಮ್ಮುಖದಲ್ಲಿ ಪರಿಚಯಿಸಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಾದ ಶ್ರೀ. ಡಿ ರಂದೀಪ್, ಐಎಎಸ್, ಜಂಟಿ ನಿರ್ದೇಶಕರು (ವೈದ್ಯಕೀಯ) ಎಚ್‌ಎಫ್‌ಡಬ್ಲ್ಯು ಡಾ ರಜನಿ ಮತ್ತು ಆರೋಗ್ಯ ಸೌಧದಲ್ಲಿ ಎಚ್&ಎಫ್‌ಡಬ್ಲ್ಯು ನ ಅಧಿಕಾರಿಗಳು, ಅಪೋಲೊ ಆಸ್ಪತ್ರೆಗಳ ಕರ್ನಾಟಕ ಮತ್ತು ಕೇಂದ್ರ ಪ್ರದೇಶ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಮನೀಶ್ ಮಟ್ಟೂ, ಬೆಂಗಳೂರು ಅಪೋಲೊ ಆಸ್ಪತ್ರೆ ಕ್ಲಿನಿಕಲ್ ಅಡ್ಮಿನಿಸ್ಟ್ರೇಷನ್ ಜಂಟಿ ನಿರ್ದೇಶಕ ಡಾ ಪ್ರೀತಂ ಕೆ ಮತ್ತು ಉಪಾಧ್ಯಕ್ಷ ಮತ್ತು ಶೇ?ದ್ರಿಪುರಂನ ಅಪೋಲೊ ಹಾಸ್ಪಿಟಲ್ಸ್ ಘಟಕದ ಮುಖ್ಯಸ್ಥ ಉದಯ್ ದಾವ್ಡಾ ಸಮಾರಂಭದಲ್ಲಿ ಭಾಗವಹಿಸಿದ್ದರು.

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿ, ಸಾರ್ವಜನಿಕ ಆರೋಗ್ಯಕ್ಕಾಗಿ ಅಪೋಲೊ ಆಸ್ಪತ್ರೆಗಳು ತಮ್ಮ ಸಮರ್ಪಣೆಗಾಗಿ ಮತ್ತು ಈ ನಿರ್ಣಾಯಕ ಪ್ರಯತ್ನದಲ್ಲಿ ನಮ್ಮೊಂದಿಗೆ ಪಾಲುದಾರಿಕೆಗಾಗಿ ನಾನು ಶ್ಲಾಘಿಸುತ್ತೇನೆ.

ಒಟ್ಟಾಗಿ, ನಮ್ಮ ರಾಜ್ಯ ಮತ್ತು ಅದರಾಚೆಗಿನ ಆರೋಗ್ಯ ಮತ್ತು ಕ್ಷೇಮವನ್ನು ಉತ್ತೇಜಿಸುವಲ್ಲಿ ನಾವು ಗಮನಾರ್ಹ ದಾಪುಗಾಲುಗಳನ್ನು ಇಡುತ್ತೇವೆ ಎಂದು ಹೇಳಿದರು.

ಉನ್ನತ ದರ್ಜೆಯ ವೈದ್ಯಕೀಯ ಆರೈಕೆಯನ್ನು ನಿಮ್ಮ ಮನೆ ಬಾಗಿಲಿಗೆ ತರುವುದು. ನಿಮ್ಮ ಆರೋಗ್ಯದ ಮೇಲೆ ಹೂಡಿಕೆ ಮಾಡುವುದು ಎಂದಿಗೂ ಅನುಕೂಲಕರವಾಗಿಲ್ಲ" ಎಂದು ಅಪೋಲೊ ಆಸ್ಪತ್ರೆಗಳ ಕರ್ನಾಟಕ ಮತ್ತು ಕೇಂದ್ರ ಪ್ರದೇಶ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಮನೀಶ್ ಮಟ್ಟೂ ಹೇಳಿದರು.

# ರೇಣುಕಾಸ್ವಾಮಿ ಹತ್ಯೆ, ಮ್ಯಾನೇಜರ್ ದೇವರಾಜ್ ವಶಕ್ಕೆ

ನೀವೇನಾದರೂ ನೇರವಾಗಿ ಸಂಪರ್ಕದಲ್ಲಿ ಇದ್ರಾ, ಆರೋಪಿ ರಘು ನಿಮ್ಮನ್ನು ಭೇಟಿಯಾಗಿ ಹೇಳಿದ್ದೇನು, ಶೆಡ್ ಒಳಗೆ ಯಾರೆಲ್ಲ ಹೋದರು, ನೀವೂ ಹೋಗಿದ್ರಾ ಎಂಬುದು ಸೇರಿ ಹತ್ತಾರು ಪ್ರಶ್ನೆಗಳಿಗೆ ಹೇಳಿಕೆಯನ್ನು ದಾಖಲಿಸಲಿದ್ದಾರೆ.

**ಜಗ್ಗನಿಂದ ಚಿನ್ನ ಕಳವು:**

ರೇಣುಕಾಸ್ವಾಮಿ ಬರ್ಬರ ಕೊಲೆಯ ಬಳಿಕ ಅವರ ಮೈಮೇಲಿದ್ದ ಚಿನ್ನಾಭರಣವನ್ನು ಕಳವು ಮಾಡಿರುವ ಮಾಹಿತಿಯನ್ನು ಆರೋಪಿ ರವಿ

ಬಾಯ್ಬಿಟ್ಟಿದ್ದಾನೆ.

ರೇಣುಕಾಸ್ವಾಮಿ ಮೈಮೇಲಿದ್ದ ಚಿನ್ನವನ್ನು ಆರೋಪಿ ಜಗ್ಗ ದೋಚಿದ್ದಾನೆ ಎಂದು ಪೊಲೀಸರ ಮುಂದೆ ರವಿ ಹೇಳಿಕೆ ನೀಡಿದ್ದಾನೆ.

ಸುಮ್ಮನಹಳ್ಳಿ ಬಳಿ ರೇಣುಕಾಸ್ವಾಮಿ ಶವವನ್ನ ಎಸೆದರು. ಬಳಿಕ ಪೊಲೀಸ್ ಠಾಣೆಗೆ ಶರಣಾಗುವಂತೆ ಹೇಳಿದರು.

ಆದರೆ ಭಯದಿಂದ ಠಾಣೆಗೆ ಹೋಗದೆ ಕಾರಿನಲ್ಲಿ ದುರ್ಗಕ್ಕೆ ಬಂದೆ. ಕಾರಿನಲ್ಲಿ ಜಗ್ಗನ ಜೊತೆ ಚಿತ್ರದುರ್ಗಕ್ಕೆ ಬಂದುಬಿಟ್ಟೆ. ಆರೋಪಿ ಜಗ್ಗ ಚಿನ್ನಾಭರಣ ತೆಗೆದುಕೊಂಡು ಬಂದಿದ್ದ ಎಂದು ರವಿ ಹೇಳಿದ್ದಾನೆ.

**ಘಟನೆ ವಿವರ:**

ಕಳೆದ ಜೂ. 8 ರಂದು ಚಿತ್ರದುರ್ಗ ಮೂಲದ ರೇಣುಕಾಸ್ವಾಮಿಯನ್ನು ಅಪಹರಿಸಿ ನಗರಕ್ಕೆ ಕರೆತಂದು ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿಗೆ

ಚಿತ್ರಹಿಂಸೆ ನೀಡಿ ಕೊಲೆ ಮಾಡಲಾಗಿತ್ತು. ಹತ್ಯೆಯ ನಂತರ ಶವವನ್ನು ಸುಮ್ಮನಹಳ್ಳಿ ಮೋರಿಗೆ ಬಿಸಾಕಿ ಪಾತಕಿಗಳು ತೆರಳಿದ್ದಾರೆ.

ಇತ್ತ ಮೂವರು ಹಣದ ವಿಚಾರಕ್ಕೆ ಕೊಲೆ ನಡೆದಿರುವುದಾಗಿ ಕಾಮಾಕ್ಷಿಪಾಳ್ಯ ಪೊಲೀಸರ ಮುಂದೆ ಶರಣಾಗಿದ್ದಾರೆ.

ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡ ಪೊಲೀಸರಿಗೆ ಸ್ಟಾರ್ ನಟ ಭಾಗಿಯಾಗಿರುವುದು ಪತ್ತೆಯಾಗಿ ಕೂಡಲೇ ಎಸಿಪಿ ಚಂದನ್ ಮತ್ತು ಇನ್ಸ್ ಪೆಕ್ಟರ್ ಗಿರೀಶ್ ನಾಯ್ಕ್ ತಂಡ ಮೈಸೂರಗೆ ತೆರಳಿ ದರ್ಶನ್‌ನನ್ನು ಅರೆಸ್ಟ್ ಮಾಡಿ ಬೆಂಗಳೂರಿಗೆ ಕರೆತಂದಿದ್ದಾರೆ. ಇತ್ತ ದರ್ಶನ್ ಗೆಳತಿ ಪವಿತ್ರಾ ಗೌಡರನ್ನು ಕೂಡ ಪೊಲೀಸರು ಬಂಧಿಸಿದ್ದಾರೆ.

ಪ್ರಕರಣ ಸಂಬಂಧ ಇದುವರೆಗೆ 16 ಮಂದಿಯನ್ನು ಪೊಲೀಸರು ಬಂಧಿಸಿದ್ದು, ಸ್ಥಳ ಮಹಜರು ಜೊತೆಗೆ ತನಿಖೆ ನಡೆಸುತ್ತಿದ್ದಾರೆ.

# 3 ದಿನ ರಾಜ್ಯದಲ್ಲಿ ಮಳೆ ಮುನ್ಸೂಚನೆ

ಬಿಸಿಲಿನ ತಾಪಕ್ಕೆ ಜನಜೀವನ ದುಸ್ತರವಾಗಿದೆ.

ಅಲ್ಲಿನ ಜನರು ಮಳೆಯ ನಿರೀಕ್ಷೆಯಲ್ಲಿದ್ದಾರೆ.

ಈ ಮಧ್ಯೆ, ಈಶಾನ್ಯ ರಾಜ್ಯಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಭಾರತೀಯ ಹವಾಮಾನ ಇಲಾಖೆ ಪ್ರಕಾರ, ಉತ್ತರ ಭಾರತದಲ್ಲಿ ಇನ್ನೂ ಕೆಲವು ದಿನಗಳ ಕಾಲ ವಿಪರೀತ ಶಾಖದ ಸ್ಥಿತಿ ಮುಂದುವರಿಯುತ್ತದೆ. ಮುಂದಿನ ಎರಡು ದಿನಗಳ ಕಾಲ ಪೂರ್ವ ಭಾರತದಲ್ಲಿ ಗರಿಷ್ಠ ತಾಪಮಾನದಲ್ಲಿ ಯಾವುದೇ ಬದಲಾವಣೆಯಾಗುವ ಸಾಧ್ಯತೆ ಇಲ್ಲ.

ರಾಜಧಾನಿ ಬೆಂಗಳೂರು ಸೇರಿದಂತೆ ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ನಿರಂತರ ಮಳೆಯಾಗಿದೆ. ಈಗ ಮುಂದಿನ ಕೆಲವು ದಿನ ಇದೇ ರೀತಿ ಮಳೆಯಾಗುವ ಮುನ್ಸೂಚನೆ ಇದೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಮಳೆಯಿಂದ ಎದುರಾಗಬಹುದಾದ ಸಮಸ್ಯೆ ಬಗ್ಗೆ ಮುನ್ನೆಚ್ಚರಿಕೆ ವಹಿಸಲಾಗಿದೆ.

ಇನ್ನು 5 ದಿನಗಳಲ್ಲಿ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮುಂಗಾರು ಚುರುಕುಗೊಳ್ಳಲಿದೆ ಎನ್ನಲಾಗಿದೆ.

ಏತನ್ಮಧ್ಯೆ, ಇಂದಿನಿಂದ ಜೂನ್ 20 ರವರೆಗೆ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದು.

ಸಂಜೆಯ ನಂತರ ಬೆಂಗಳೂರಿನಲ್ಲಿ ವಾಡಿಕೆಯಂತೆ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕಳೆದ ಎರಡು ದಿನಗಳಿಂದ ಬೆಂಗಳೂರು ನಗರದಲ್ಲಿ ತಾಪಮಾನ ಗಣನೀಯವಾಗಿ ಕುಸಿದಿದ್ದು, ಅದೇ ರೀತಿ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣ ಮುಂದುವರಿಯಲಿದೆ.

ಹವಾಮಾನ ಇಲಾಖೆಯ ಪ್ರಕಾರ, ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರಾ, ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಮುಂದಿನ ಏಳು ದಿನಗಳಲ್ಲಿ ಗುಡುಗು ಮತ್ತು ಮಿಂಚು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಇಂದು ಮತ್ತು ನಾಳೆ ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆ (204.4 ಮಿಮೀ) ಬೀಳುವ ಸಾಧ್ಯತೆಯಿದೆ. ಆದ್ದರಿಂದ ಈ ಪ್ರದೇಶಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.

ಹವಾಮಾನ ಇಲಾಖೆ ಪ್ರಕಾರ, ಇಂದು ಬಿಹಾರ, ಉತ್ತರಾಖಂಡ, ಹಿಮಾಚಲ ಪ್ರದೇಶ ಮತ್ತು ಜಾರ್ಖಂಡ್‌ನ ಕೆಲವು ಭಾಗಗಳಲ್ಲಿ ತೀವ್ರ ಶಾಖದ ಅಲೆ ಉಂಟಾಗುತ್ತದೆಮುಂದಿನ 4-5 ದಿನಗಳಲ್ಲಿ, ನೈಋತ್ಯ ಮಾನ್ಸೂನ್ ಮಹಾರಾಷ್ಟ್ರ, ಛತ್ತೀಸ್‌ಗಢ, ಒಡಿಶಾ, ಕರಾವಳಿ ಆಂಧ್ರ ಪ್ರದೇಶ ಮತ್ತು ಈಶಾನ್ಯ ಬಂಗಾಳದ ಕೆಲವು ಭಾಗಗಳನ್ನು ಹೊಡೆಯಬಹುದು.

ಹವಾಮಾನ ಇಲಾಖೆ ಪ್ರಕಾರ, ಮುಂದಿನ ಐದು ದಿನಗಳಲ್ಲಿ ಈಶಾನ್ಯ ರಾಜ್ಯಗಳಾದ ಸಿಕ್ಕಿಂ, ಅಸ್ಸಾಂ, ಅರುಣಾಚಲ ಪ್ರದೇಶ, ಮಿಜೋರಾಂನಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ನಿನ್ನೆ ಶನಿವಾರ ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಹಲವೆಡೆ ಭಾರೀ ಮಳೆ ದಾಖಲಾಗಿದೆ. ಮುಂದಿನ ಕೆಲ ದಿನಗಳ ಕಾಲ ಉತ್ತರ ಭಾರತದ ಹಲವು ರಾಜ್ಯಗಳಲ್ಲಿ ಬಿಸಿಗಾಳಿ ಬೀಸಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ನಾಳೆಯಿಂದ ದಿ.19 ರವರಿಗೆ ಪಶ್ಚಿಮ ಉತ್ತರ ಪ್ರದೇಶದ ಹಲವು ಭಾಗಗಳು ತೀವ್ರವಾದ ಶಾಖದ ಸ್ಥಿತಿಯನ್ನು ಅನುಭವಿಸುತ್ತವೆ.

ಜೂನ್ 18 ರಂದು ಜಮ್ಮು ವಿಭಾಗ, ಹಿಮಾಚಲ ಪ್ರದೇಶ, ಹರಿಯಾಣ, ಚಂಡೀಗಢ, ದೆಹಲಿ, ಪಂಜಾಬ್ ಮತ್ತು ರಾಜಸ್ಥಾನದ ವಿವಿಧ ಸ್ಥಳಗಳಲ್ಲಿ ಶಾಖದ ಅಲೆಯ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

# ಅಧಿಸೂಚಿತ ಕೃಷಿ ಉತ್ಪನ್ನ

ಬೆಂಗಳೂರು:-

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ವತಿಯಿಂದ ಬೆಂಗಳೂರು ಉತ್ತರ, ದಕ್ಷಿಣ, ಪೂರ್ವ, ಯಲಹಂಕ ಮತ್ತು ಆನೇಕಲ್ ತಾಲ್ಲೂಕುಗಳನ್ನೊಳಗೊಂಡ ಪ್ರದೇಶಗಳಿಗೆ ಸಮಿತಿಯ ಮಾರುಕಟ್ಟೆ ಕ್ಷೇತ್ರ ವ್ಯಾಪ್ತಿಯಲ್ಲಿ ಕೃಷಿ ಉತ್ಪನ್ನಗಳಗಳನ್ನು ವ್ಯವಹರಿಸುವ ಎಲ್ಲಾ ಸಗಟು ವ್ಯಾಪ್ಯಾರಿಗಳು, ಸಂಸ್ಕರಣಗಾರರು, ದಾಸ್ತಾನುದಾರರು, ಅಮದುದಾರರು, ರಫ್ತುದಾರರು, ಜಿನ್ನರ್ಸ್, ಕ್ರಷರ್ಸ್ ಹಾಗೂ ಇನ್ನಿತರೆ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ವ್ಯವಹರಿಸುವವರು ಕಡ್ಡಾಯವಾಗಿ ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ಹಾಗೂ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಬೆಂಗಳೂರು ಅಥವಾ ಅವರಿಂದ ಪ್ರಾಧೀಕರಿಸಲ್ಪಟ್ಟ ಅಧಿಕಾರಿಯಾದ ಉಪ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ಬೆಂಗಳೂರು ಇವರಿಂದ ಲೈಸನ್ಸ್‌ಗಳನ್ನು ಪಡೆಯಬೇಕು.

ಸಮಿತಿಯ ಮಾರುಕಟ್ಟೆ ಪ್ರದೇಶದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ವ್ಯವಹರಿಸುತ್ತಿರುವ ಪ್ರತಿಯೊಬ್ಬ ಪೇಟೆ ಕಾರ್ಯಕರ್ತರು ದಿನಾಂಕ 06.03.2024ರ ಅಂತ್ಯಕ್ಕಿದಂತೆ ಕಾಯ್ದೆ ತಿದ್ದುಪಡಿ ಪೂರ್ವದಲ್ಲಿ ಖರೀದಿಸಿದ ಕೃಷಿ ಉತ್ಪನ್ನಗಳ ದಾಸ್ತಾನಿನ ಅಂತಿಮ ಶಿಲ್ಕು ಮತ್ತು ತಿದ್ದುಪಡಿ ಕಾಯ್ದೆ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕ 07.03.2024 ರಿಂದ ಖರೀದಿಸಿದ ಕೃಷಿ ಉತ್ಪನ್ನಗಳ ಪ್ರಾರಂಭಿಕ ದಾಸ್ತಾನನ್ನು ಘೋಷಿಸಿಕೊಳ್ಳತಕ್ಕದ್ದು, ಹಾಗೆ ಘೋಷಿಸಿಕೊಂಡ ಅಧಿಸೂಚಿತ ಕೃಷಿ ಉತ್ಪನ್ನಗಳ ವಿವರವನ್ನು ನಿರ್ದಿಷ್ಟಪಡಿಸಲಾಗಿರುವ ನಮೂನೆಯ ಮೂಲಕ ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮಹಾತ್ಮ ಗಾಂಧಿ ಸಂಕೀರ್ಣ, ಮಾರುಕಟ್ಟೆ ಪ್ರಾಂಗಣ, ಯಶವಂತಪುರ, ಬೆಂಗಳೂರು ಅಥವಾ ದೂರವಾಣಿ ಸಂಖ್ಯೆ: 080-23472850 / 23371695 ಗೆ ಸಂಪರ್ಕಿಸಬಹುದು ಎಂದು ಬೆಂಗಳೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಿಲ್ಲೇಸೂಗುರು ಗ್ರಾಮ ಪಂಚಾಯತಿಗೆ ಇಒ ಭೇಟಿ, ಪರಿಶೀಲನೆ

ರಾಯಚೂರು:-

ತಾಲೂಕಿನ ಗಿಲ್ಲೇಸೂಗುರು ಗ್ರಾಮ ಪಂಚಾಯತಿಗೆ ತಾಲೂಕ ಪಂಚಾಯತಿ ಕಾರ್ಯನಿರ್ವಾಹ ಅಧಿಕಾರಿಗಳಾದ ಚಂದ್ರಶೇಖರ ಪವಾರ್ ಅವರು ಭೇಟಿ ನೀಡಿ, ನರೇಗಾ ವಿವಿಧ ಕಾಮಗಾರಿಯನ್ನು ಪರಿಶೀಲನೆ ಮಾಡಿದರು.

ನಂತರ ಕೂಲಿಕಾರಜೊತೆ ಮಾತನಾಡಿ, ಬೂಜ ಗುಡ್ಡದಲ್ಲಿ ಉತ್ತಮವಾಗಿ ಕಂದಕ ಬದು ನಿರ್ಮಾಣ ಮಾಡುವುದರಿಂದ ಈ ಗುಡ್ಡದಲ್ಲಿ ಬಿಳುವ ಮಳೆಯ ನೀರು ಹರಿದು ಹೋಗದಂತೆ ತಡೆಯಲು ಕಂದಕ ಬದು ಸಹಕಾರಿಯಾಗುತ್ತದೆ. ಮತ್ತು ಸುತ್ತಮುತ್ತಲಿನ ರೈತರ ಜಮೀನುಗಳ ಭೋರವೇಲ್‌ಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚಾಗುವುದರಿಂದ ರೈತರಿಗೆ ಬೆಳೆ ಬೆಳೆಯಲು ಅನುಕೂಲವಾಗಲಿದ್ದು, ಉತ್ತಮವಾಗಿ ಕಂದಕ ಬದುಗಳನ್ನು ನಿರ್ಮಾಣ ಮಾಡಬೇಕೆಂದು ಹೇಳಿದರು.

ನಂತರ ಮೇಟ್‌ಗಳೊಂದಿಗೆ ಚರ್ಚೆ ಮಾಡಿ ಪ್ರತಿ ದಿನ ಎನ್,ಎಮ್,ಎಮ್,ಎಸ್ ಪ್‌ನಲ್ಲಿ ಸಕ್ರಿಯವಾಗಿ ನೈಜ ಹಾಜರಾತಿಯನ್ನು ನೀಡಬೇಕೆಂದರು.

ನಂತರ ಪಿಡಿಒ ಮತ್ತು ತಾಂತ್ರಿಕ ವರ್ಗದವರ ಜೊತೆ ಮಾತನಾಡಿ, ಗುಡ್ಡದ ಕೆಳ ಭಾಗದಲ್ಲಿ ದೊಡ್ಡದಾದ ಕಂದಕ ಬದು ನಿರ್ಮಾಣ ಮಾಡಿದಾಗ, ಸುಮಾರು 2ಲಕ್ಷ ಲೀಟರ್ ನೀರನ್ನು ಸಂಗ್ರಹ ಮಾಡಲು ಸಾಧ್ಯವಾಗುತ್ತಿದ್ದು, ಇದ-ರಿಂದ ಜಾನುವಾರಗಳಿಗೆ ಮೇವು ಬೆಳೆಯಲು ಮತ್ತು ನೀರು ಕುಡಿಯಲು ಅನುಕೂಲವಾಗುತ್ತದೆ. ಈ ಬೂಜಗುಡ್ಡವು ಅಂತರ್ಜಲ ಮಟ್ಟ ಹೆಚ್ಚು ಮಾಡಲು ಸಹಕಾರಿಯಾಗಲಿದೆ. ತಾವುಗಳು ಉತ್ತಮ ರೀತಿಯಲ್ಲಿ ಕೆಲಸ ನಿರ್ವಹಣೆ ಮಾಡುವಂತೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ನರೇಗಾ ಸಹಾಯಕ ನಿರ್ದೇಶಕ ಹನುಮಂತ ವ, ಪಿಡಿಒ ರವಿಕುಮಾರ್, ಬಿ.ಸಿ ಭೀಮರೆಡ್ಡಿ, ಬಿ.ಎಫ್.ಟಿ ಇಮಾನವೇಲ್, ಜಿ.ಕೆ.ಎಮ್ ಭೀಮವ್ವ ಹಾಗೂ ಮೇಟ್ ಕೂಲಿಕಾರರು ಮತ್ತು ಗ್ರಾ.ಪಂ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಜಿಲ್ಲಾ ಕೈಗಾರಿಕಾ ತರಬೇತಿ, ಉದ್ಯೋಗ ಸಂಸ್ಥೆ: ಶಿಶುಕ್ಷು ಕ್ಯಾಂಪಸ್ ಆಯೋಜನೆ

ರಾಯಚೂರು:-

ಇಲ್ಲಿಯ ಜಿಲ್ಲಾ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಸಂಸ್ಥೆಯಲ್ಲಿ ಇದೇ ಜೂ.19ರಿಂದ 20ರವರೆಗೆ ಬಿ.ಇ.ಎಲ್ ಕಂಪನಿ ವತಿಯಿಂದ ಶಿಶುಕ್ಷು ಕ್ಯಾಂಪಸ್ ಡ್ರೈವ್‌ವನ್ನು ಆಯೋಜಿಸಲಾಗಿದ್ದು, ಸಂಸ್ಥೆಯಲ್ಲಿ ತರಬೇತಿ ಪಡೆದ ಅಭ್ಯರ್ಥಿಗಳು ಭಾಗವಹಿಸಿಬಹುದಾಗಿದೆ.

ತರಬೇತಿದಾರರು ಕಡ್ಡಾಯವಾಗಿ ಇತ್ತಿಚಿನ 2 ಭಾವಚಿತ್ರ, ಬಯೋಡಾಟಾ, ಗುರುತಿನ ಚೀಟಿ (ಆದಾರ್ ಅಥವಾ ವೋಟರ್), ದೃಡೀಕೃತ ಎಸ್.ಎಸ್.ಎಲ್.ಸಿ ಮತ್ತು ಐ.ಟಿ,ಐ ಉತ್ತೀರ್ಣರಾಗಿರುವ ಅಂಕಪಟ್ಟಿ (ದ್ವಿಪ್ರತಿಗಳಲ್ಲಿ)ಯ ದಾಖಾಲಾತಿಯೊಂದಿಗೆ ಹಾಜಾರಾಗುವಂತೆ ಸಂಸ್ಥೆಯ ದರ್ಜೆ-1ರ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಬೆಂಗಳೂರು:-

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2023-24ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯ ಹಾಗೂ ಅರಣ್ಯ ಆಧಾರಿತ ಆದಿವಾಸಿ ಸಮುದಾಯದ ನಿರುದ್ಯೋಗ ಯುವಕ ಮತ್ತು ಯುವತಿಯರಿಗೆ ವಿವಿಧ ಕೌಶಲ್ಯಾಭಿವೃದ್ಧಿ (ತಾಂತ್ರಿಕ ನೈಪುಣ್ಯತೆ) ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಬಹು ಕೌಶಲ್ಯ ತಂತ್ರಜ್ಞ (ವಿದ್ಯುತ್) ಗೆ 8ನೇ ತರಗತಿ ಉತ್ತೀರ್ಣರಾಗಿರಬೇಕು,. ಸ್ವಯಂ ಉದ್ಯೋಗದ ಟೈಲರ್‌ಗೆ 8ನೇ ತರಗತಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿರಬೇಕು., ಸಹಾಯಕ ಸೌಂದರ್ಯ ಚಿಕಿತ್ಸಕ ಗೆ 8ನೇ ತರಗತಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿರಬೇಕು ಮತ್ತು ಡೊಮೆಸ್ಟಿಕ್ ಡೇಟಾ ಎಂಟ್ರಿ ಆಪರೇಟರ್ ಗೆ 10ನೇ ತರಗತಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳು18-46 ವಯೋಮಿತಿಯೊಳಗಿರಬೇಕು. ಎರಡು ತಿಂಗಳ ಅವಧಿ ತರಬೇತಿ ನೀಡಲಾಗುತ್ತದೆ.

# ಉಪಲೋಕಾಯುಕ್ತರಿಂದ ಅಹವಾಲು ಸ್ವೀಕಾರ



ಗದಗ:–

ಇಲಾಖೆಯ ಅಧಿಕಾರಿಗಳು ಜನಸಾಮಾನ್ಯರಿಗೆ ವಿವಿಧ ಸೌಲಭ್ಯಗಳನ್ನು ತಲುಪಿಸುವಲ್ಲಿ ಸಮಯೋಚಿತವಾಗಿ ಪ್ರಾಮಾಣಿಕವಾಗಿ ನಿಷ್ಠೆಯಿಂದ ಕರ್ತವ್ಯನಿರ್ವಹಿಬೇಕು. ಅಧಿಕಾರಿಗಳು ಸಾರ್ವಜನಿಕರೊಂದಿಗೆ ತಾಳ್ಮೆ ಹಾಗೂ ಸೌಜನ್ಯದಿಂದ ವರ್ತಿಸುವುದು ಇಂದಿನ ಅವಶ್ಯಕತೆಯಾಗಿದೆ ಎಂದು ಕರ್ನಾಟಕ ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಹಾದಲ್ಲಿ ಸಾರ್ವಜನಿಕರಿಂದ ಅಹವಾಲು ಹಾಗೂ ಮನವಿ ಸ್ವೀಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ದೇಶದ ಸಂವಿಧಾನವು ಸಮಪಾಲು ಸಮಬಾಳು ಎನ್ನುವ ಪವಿತ್ರ ಧ್ಯೇಯೋದ್ದೇಶವನ್ನು ಹೊಂದಿದ್ದು ದೇಶದ ಪ್ರತಿಯೊಬ್ಬ ಪ್ರಜೆಯೂ ಗೌರವಯುತ ಜೀವನ ನಡೆಸಲು ಅವರಿಗೆ ಸೌಲಭ್ಯ ಒದಗಿಸುವುದು ಸರ್ಕಾರದ ಕರ್ತವ್ಯವಾಗಿದೆ. ಆ ನಿಟ್ಟಿನಲ್ಲಿ ಕಾನೂನುಗಳು ಹಾಗೂ ವಿವಿಧ ಸೌಲಭ್ಯಗಳು ತಾಯಿ ಗರ್ಭದಲ್ಲಿರುವಾಗಲೇ ಆ ಮಗುವಿಗೆ ಪ್ರಾರಂಭವಾಗುತ್ತವೆ. ಸಂವಿಧಾನವು ಪ್ರತಿಯೊಬ್ಬರಿಗೂ ಹಕ್ಕು ಮತ್ತು ಬಾಧ್ಯತೆಗಳನ್ನು ಕೊಟ್ಟಿದ್ದು ಅವುಗಳು ಸದುಪಯೋಗವಾಗಬೇಕು.

ನಮಗೆ ದೇಶ ಏನು ಕೊಟ್ಟಿದೆ ಎನ್ನುವುದರ ಬದಲು ದೇಶಕ್ಕಾಗಿ ನಾವು ಏನು ಕೊಟ್ಟಿದ್ದೇವೆ ಎಂದು ಪ್ರತಿಯೊಬ್ಬರೂ ತಮ್ಮಷ್ಟಕ್ಕೆ ತಾವೇ ಅರ್ಥೈಸಿಕೊಳ್ಳಬೇಕಾಗಿದೆ ಎಂದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಸಭೆಯ ಅಧ್ಯಕ್ಷತೆ ವಹಿಸಿ ಸರ್ವರನ್ನು ಸ್ವಾಗತಿಸಿ ಮಾತನಾಡಿ, ಸಾರ್ವಜನಿಕರು ಉಪಲೋಕಾಯುಕ್ತರಿಗೆ ತಮ್ಮ ಅಹವಾಲುಗಳನ್ನು ಸ್ವೀಕರಿಸಲು ವ್ಯವಸ್ಥೆ ಕಲ್ಪಿಸಲಾಗಿದೆ. ನೂಕು ನುಗ್ಗಲಾಗದಂತೆ ಒಬ್ಬೊಬ್ಬರಾಗಿ ತಮ್ಮ ಅಹವಾಲುಗಳೊಂದಿಗೆ ಅಗತ್ಯದ ದಾಖಲೆಗಳನ್ನು ಲಗತ್ತಿಸಿ ದೂರು ನೀಡಲು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ಸಂಕದ, ಸಂಪನ್ಮೂಲ ವ್ಯಕ್ತಿ ಪ್ರಕಾಶ ನಾಡ ಗೇರ, ಉಪನಿಬಂಧಕರಾದ ಅಮರನಾರಾಯಣ ಕೆ., ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿಎಂ ಪಾಟೀಲ, ಗದಗ ಲೋಕಾಯುಕ್ತ ಎಸ್ಪಿ ಸತೀಶ ಚಿಟಗುಬ್ಬಿ, ಡಿವೈಎಸ್ಪಿ ವಿಜಯ ಬಿರಾದಾರ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಜಿ.ಎಸ್.ಪಲ್ಲೇದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು. ವೆಂಕಟೇಶ ಅಲ್ಕೋಡ ಹಾಗೂ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಪ್ರಾಚಾರ್ಯರಾದ ಬಸವರಾಜ ಗಿರಿತಿಮ್ಮಣ್ಣವರ ಕಾರ್ಯಕ್ರಮ ನಿರ್ವಹಿಸಿದರು.

## ಬಿತ್ತನೆ ಬೀಜ, ರಸಗೊಬ್ಬರ ಕೊರತೆಯಾಗದಂತೆ ಕ್ರಮಕ್ಕೆ ಸೂಚನೆ



ಹುಬ್ಬಳ್ಳಿ:–

ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದೆ. ರೈತರು ಈಗ ಬಿತ್ತನೆ ಮಾಡುತ್ತಿದ್ದಾರೆ. ಜಿಲ್ಲೆಯಲ್ಲಿ ಸರಿಸುಮಾರು ಶೇ. 70 ರಿಂದ 80 ರಷ್ಟು ಬಿತ್ತನೆ ಮಾಡಲಾಗಿದೆ. ಹೀಗಾಗಿ ರೈತರಿಗೆ ಯಾವುದೇ ರೀತಿಯಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಕೊರತೆಯಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಶಾಸಕರಾದ ಎಂ.ಆರ್.ಪಾಟೀಲ ಹೇಳಿದರು.

ತಾಲೂಕು ಆಡಳಿತ ಸೌಧದ ತಾಲೂಕು ಪಂಚಾಯತ ಸಭಾಭವನದಲ್ಲಿ ಕುಂದಗೋಳ ಮತಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆ(ಕೆಡಿಪಿ) ಯನ್ನುದ್ದೇಶಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹೊಸದಾಗಿ ವಸತಿ ನಿಲಯಗಳಿಗೆ ಅರ್ಜಿ ಸಲ್ಲಿಸುವ ಕುರಿತು ಆನ್‌ಲೈನ್ ವೆಬ್‌ಸೈಟ್ ತೆರೆದಿರುವುದಿಲ್ಲ. ಅಲ್ಲದೇ ಈ ಭಾಗದ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರವೇಶಗಳು ದೊರೆಯಬೇಕು. ಈ ಕುರಿತು ಅಧಿವೇಶನದಲ್ಲಿ ಪ್ರಶ್ನೆ ಮಾಡಿದ್ದೆ. ಈಗಾಗಲೇ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರ ಜೊತೆಗೆ ಈ ವಿಷಯದ ಕುರಿತು ಮಾತನಾಡಿದ್ದೇನೆ ಎಂದು ಶಾಸಕರು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಹುಬ್ಬಳ್ಳಿ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಡಾ.ರಾಮಚಂದ್ರ ಹೊಸಮನಿ, ನರೇಗಾ ಯೋಜನೆಯ ಸಹಾಯಕ ನಿರ್ದೇಶಕರಾದ ಸದಾನಂದ ಅಮರಾಪುರ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸುರೇಶ ಗುರಣ್ಣವರ, ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಉಮೇಶ ಬೊಮ್ಮಕ್ಕನವರ, ಅಕ್ಷರ ದಾಸೋಹ ಯೋಜನೆಯ ಎಸ್.ವಿ. ಬಂಗಾರಿಮಠ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

# ಕನ್ನಡ ಪುಸ್ತಕ ಹಂಚುವ, ಓದುವ ಪರಂಪರೆ ಶ್ರೇಷ್ಠ



ಬಾಗಲಕೋಟೆ:–

ಕಂಪ್ಯೂಟರ್ ಯುಗದಲ್ಲಿರುವ ಇಂದಿನ ಯುವ ಸಮೂಹವು ಕನ್ನಡ ಪುಸ್ತಕಗಳನ್ನು ಓದುಗರಿಗೆ ಹಂಚುವ ಹಾಗೂ ಓದುವ ಪರಂಪರೆ ಬೆಳೆಸುವುದು ಉತ್ತಮ ಎಂದು ಡಾ.ಲಕ್ಷ್ಮೀಕಾಂತ ಪಾಂಚಾಳ ಹೇಳಿದರು.

ರಾಂಪೂರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಡಾ.ಲಕ್ಷ್ಮೀಕಾಂತ ಪಂಚಾಳ ಅವರು ಬಾಗಲಕೋಟೆ ಜಿಲ್ಲಾ ಕನ್ನಡ ಸಾಹಿತ್ಯ ಪರಿ?ತ್ತಿಗೆ ಭೇಟಿ ನೀಡಿ, ತಮ್ಮ ಯೋಜನಾ ಸಂಚಾಲಕತ್ವದಲ್ಲಿ ಕಲಬುರ್ಗಿಯ ಸಿದ್ದಲಿಂಗೇಶ್ವರ ಪ್ರಕಾಶನದ 'ಕನ್ನಡ ಸಾಹಿತ್ಯ ಪುನರಾವಲೋಕನ ಮಾಲೆ' ಹತ್ತು ಸಂಪುಟಗಳ ಗ್ರಂಥಗಳನ್ನು ಹಾಗೂ 101 ಮೌಲ್ಯಯುತ ಕನ್ನಡ ಲೇಖನಗಳನ್ನು ಹೊಂದಿರುವ 'ಸೌಹಾರ್ದ ಪಥ' ಮಹಾಗ್ರಂಥವನ್ನು ಬಾಗಲಕೋಟೆ ಕಸಾಪ ಜಿಲ್ಲಾಧ್ಯಕ್ಷರಾದ ಶಿವಾನಂದ ಶೆಲ್ಲಿಕೇರಿ ಅವರಿಗೆ ನೀಡಿದರು. ಕನ್ನಡ ಪುಸ್ತಕಗಳನ್ನು ಹಂಚುವದರೊಂದಿಗೆ ಓದುವ ಪರಂಪರೆ ಮತ್ತು ಪ್ರೇರಣೆ ಬೆಳೆಸಿಕೊಳ್ಳಬೇಕೆಂದು ಹೇಳಿದರು.

ಕಸಾಪ ಜಿಲ್ಲಾಧ್ಯಕ್ಷರಾದ ಶಿವಾನಂದ ಶೆಲ್ಲಿಕೇರಿ ಅವರು ಕನ್ನಡ ಪುಸ್ತಗಳನ್ನು ಸ್ವೀಕರಿಸಿ ಮಾತನಾಡಿ, ಕನ್ನಡ ಸಹಾಯಕ ಪ್ರಾಧ್ಯಾಪಕರಾದ ಡಾ.ಲಕ್ಷ್ಮೀಕಾಂತ ಪಾಂಚಾಳ ಅವರು ಕನ್ನಡ ಪುಸ್ತಕಗಳು ಹಂಚುವ ಕಾರ್ಯ ಓದುಗರಿಗೆ ಮಾದರಿಯಾಗಿದ್ದು, ಸಹೃದಯರ ಮನಸ್ಸಿಗೆ ಸ್ಪೂರ್ತಿಯಾಗಿದ್ದಾರೆ ಎಂದರು.

ಜಿಲ್ಲಾ ಗೌರವ ಕಾರ್ಯದರ್ಶಿ ಡಾ.ಚಂದ್ರಶೇಖರ ಕಾಳನ್ನವರ ಮಾತನಾಡಿ ಕನ್ನಡ ನಾಡು ನುಡಿಗಳಿಗೆ ಪ್ರೇರಣೆಯಾಗುವ ಕನ್ನಡದ ಪುಸ್ತಕಗಳು ಸದಾ ಓದುವುದರಿಂದ ಮನಸ್ಸು ಹೂವಿನಂತೆ ಅರಳುತ್ತದೆ. ಎಲ್ಲರೂ ಕನ್ನಡ ಪುಸ್ತಕ ಓದುವ ಪ್ರೀತಿಯನ್ನು ಬೆಳಸಿಕೊಳ್ಳಬೇಕು ಎಂದು ಹೇಳಿದರು.

ತಾಲೂಕು ಕಸಾಪ ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ, ಸಾಹಿತಿಗಳಾದ ಡಾ.ಪ್ರಕಾಶ ಖಾಡೆ, ಡಾ.ಮೈನುದ್ದೀನ್ ರೇವಡಿಗಾರ, ಪ್ರೊ.ನಾಡಗೌಡರ, ರಾಜೇಂದ್ರ ಸೇರಿದಂತೆ ಸಾಹಿತ್ಯಾಸಕ್ತರು ಉಪಸ್ಥಿತರಿದ್ದರು.

# ಮಕ್ಕಳಿಗೆ ದುಡಿಮೆ ಬೇಡ, ಶಿಕ್ಷಣ ನೀಡಿ: ರವೀಂದ್ರಕುಮಾರ



ಜೇವರ್ಗಿ:–

ಸರಕಾರ ಉಚಿತ ಶಿಕ್ಷಣವನ್ನು ನೀಡುತ್ತಿದೆ. ಪಾಲಕರು ಮಕ್ಕಳಿಗೆ ದುಡಿಮೆಗೆ ಕಳಿಸಿದೆ, ಶಿಕ್ಷಣ ನೀಡಬೇಕು ಎಂದು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ರವೀಂದ್ರಕುಮಾರ ಸಿ.ಬಟಗೇರಿ ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದ ಸಮೀಪವಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಎನ್.ಎಸ್.ಎಸ್ ಘಟಕದ ವತಿಯಿಂದ ಬುಧವಾರ ಏರ್ಪಡಿಸಲಾಶಗಿದ್ದ 'ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು ಬಾಲ ಕಾರ್ಮಿಕ ಪದ್ಧತಿಯು ಮಕ್ಕಳ ಬೆಳವಣಿಗೆಗೆ ಮಾರಕವಾಗಿದ್ದು, ಅದರ ನಿರ್ಮೂಲನೆಗೆ ಸಂವಿಧಾನ, ಸರ್ಕಾರಗಳು ಅನೇಕ ಕಾಯ್ದೆ–ಕಾನೂನುಗಳನ್ನು ಜಾರಿಗೊಳಿಸಿದೆ. ಇವುಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಿ ನಿರ್ಮೂಲನೆ ಮಾಡಲು ಅಧಿಕಾರಿಗಳ ಇಚ್ಛಾಶಕ್ತಿ ಹಾಗೂ ಪಾಲಕ–ಪೋಷಕ, ಉದ್ಯೋಗದಾತರ ಸೇರಿದಂತೆ ಎಲ್ಲರ ಸಹಕಾರ ಅಗತ್ಯವಾಗಿದೆ. ಮಕ್ಕಳಿಗೆ ದುಡಿಮೆಗೆ ಕಳಿಸಿದೆ, ಶಿಕ್ಷಣ ನೀಡಬೇಕು ಎಂದು ಪ್ರಾಚಾರ್ಯ ರವೀಂದ್ರಕುಮಾರ ಸಿ.ಬಟಗೇರಿ ಹೇಳಿದರು.

ನಂತರ ಎನ್.ಎಸ್.ಎಸ್ ಅಧಿಕಾರಿ ಎಚ್.ಬಿ.ಪಾಟೀಲ ಮಾತನಾಡಿ, ಕಾರ್ಮಿಕ ಕಾನೂನುಗಳು ಸ್ವಾತಂತ್ರ್ಯ ಪೂರ್ವದಿಂದಲೇ ರಚಿಸಲಾಗಿದೆ. ನಂತರ ಅನೇಕ ಕಾಯ್ದೆಗಳನ್ನು ಜಾರಿಗೊಳಿಸಿ ಬಾಲ ಕಾರ್ಮಿಕತೆಯ ನಿರ್ಮೂಲನೆಗೆ ಶ್ರಮಿಸಲಾಗುತ್ತಿದೆ. ಶಿಕ್ಷಣ ದೊರೆತರೆ ಹಾಗೂ ಬಡತನ ನಿರ್ಮೂಲನೆಯಾದರೆ ಬಾಲ ಕಾರ್ಮಿಕತೆ ನಿರ್ಮೂಲನೆಯಾಗುತ್ತ ಎಂಬ ಸಂಗತಿಯಿಂದ ಸರ್ಕಾರಗಳು ಅನೇಕ ಸೌಕರ್ಯಗಳನ್ನು ನೀಡುತ್ತಿವೆ. ಅವುಗಳನ್ನು ಸದುಪಯೋಗ ಪಡಿಸಿಕೊಂಡು ಪಾಲಕ–ಪೋಷಕ ವರ್ಗದವರು ತಮ್ಮ ಮಕ್ಕಳನ್ನು ಬಾಲ ಕಾರ್ಮಿಕರನ್ನಾಗಿ ಮಾಡದೆ, ಶಿಕ್ಷಣ ನೀಡಿ ಸದೃಢ ಮಾನವ ಸಂಪನ್ಮೂಲವನ್ನಾಗಿಸಬೇಕು. ಬಾಲ ಕಾರ್ಮಿಕತೆಯಿಂದಾಗುವ ದುಷ್ಪರಿಣಾಮಗಳನ್ನು ಬಾಲ ಕಾರ್ಮಿಕರು, ಪಾಲಕ–ಪೋಷಕ, ಸಮುದಾಯಕ್ಕೆ ಮನವರಿಕೆ ಮಾಡಿಕೊಟ್ಟು, ಅವರಲ್ಲಿ ಮಾನಸಿಕ ಧೈರ್ಯವನ್ನು ತುಂಬಬೇಕು. ಅಂತಹ ಕುಟುಂಬಗಳ ಆರ್ಥಿಕ ಸ್ಥಿತಿಯನ್ನು ಉತ್ತಮಗೊಳಿಸುವ ಯೋಜನೆ, ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವ ಮೂಲಕ ಬಾಲ ಕಾರ್ಮಿಕ ಪದ್ಧತಿ ನಾಶಪಡಿಸಬಹುದಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕ ಮಲ್ಲಿಕಾರ್ಜುನ ದೊಡ್ಡಮನಿ, ಪ್ರಮುಖರಾದ ರಕ್ಷಿತಾ, ಶುಗುಪ್ತ, ಸೋಹೆಲ್ ಹಾಗೂ ಸಂಸ್ಥೆಯ ಅಧ್ಯಕ್ಷ ಡಾ.ಸತೀಶ್ ಟಿ.ಸಣಮನಿ, ಉಪನ್ಯಾಸಕರಾದ ಅಶ್ವಿನಿ, ಅರ್ಚನಾ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಪತ್ರಿಕಾ ಕಾರ್ಯದರ್ಶಿ ದೇವೇಂದ್ರಪ್ಪ ಗಣಮುಖಿ, ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್.ಬಿರಾದಾರ, ಸಮಾಜ ಸೇವಕ ಅಮೃತ ಸಿ.ಪಾಟೀಲ, ಗುರುಶಾಂತಪ್ಪ, ಮಲ್ಲಿಕಾರ್ಜುನ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಡೆಂಗ್ಯೂ ದಿನದ ಕುರಿತು ಕಾರ್ಯಾಗಾರ




ಧಾರವಾಡ:–

ಧಾರವಾಡ ತಾಲೂಕಾ ಪಂಚಾಯತ ಸಭಾಭವನದಲ್ಲಿ ರಾಷ್ಟ್ರೀಯ ಡೆಂಗ್ಯೂ ದಿನದ ಕುರಿತು ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಕೀಟಶಾಸ್ತ್ರಜ್ಞ ಮಂಜುನಾಥ.ಟಿ.ಪಿ, ಅವರು ಡೇಂಗ್ಯೂ ರೋಗವು ಸೊಳ್ಳೆಗಳಿಂದ ಹರಡುವುದರಿಂದ ಸೊಳ್ಳೆಗಳ ಜೀವನಚಕ್ರ ಹಾಗೂ ಸೊಳ್ಳೆ ನಿಯಂತ್ರಣ ಕ್ರಮಗಳಿಂದ ಡೇಂಗ್ಯೂ ರೋಗ ಹರಡುವುದನ್ನು ತಪ್ಪಿಸಲು ಸಾಧ್ಯ ಎಂಬ ವಿಷಯದ ಬಗ್ಗೆ ಮಂಡಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಾ ಪಂಚಾಯತ ಕಾರ್ಯನಿರ್ವಹಣಾಧಿಕಾರಿ ಸುಭಾಷ್ ಸಂಪಗಾವ, ಕಾಲರಾ ನಿಯಂತ್ರಣಾಧಿಕಾರಿ ಡಾ.ಸವಿತಾ ನಾಡಗೌಡ, ತಾಲೂಕಾ ಆರೋಗ್ಯಾಧಿಕಾರಿ ಡಾ. ತನುಜಾ. ಕೆ.ಎನ್., ಆರೋಗ್ಯ ಮೇಲ್ವಿಚಾರಣಾಧಿಕಾರಿ ಕೆ.ಆಯ್.ಶ್ಯಾವಿ, ತಾಲೂಕಾ ಪಂಚಾಯತ ಅಧಿಕಾರಿ ಚಂದ್ರು ಪೂಜಾರಿ, ಗಿರೀಶ ಕೋರಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಸವಣ್ಯಪ್ಪ ಹೂಗಾರ, ತಾಲೂಕಾ ಆರೋಗ್ಯಾಧಿಕಾರಿಗಳು, ಸಿಬ್ಬಂದಿಗಳು, ಧಾರವಾಡ ತಾಲೂಕಿನ ಗ್ರಾಮಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

ಕಾರ್ಯಕ್ರಮದಲ್ಲಿ ಫೋಮಿಂಗ ಮಷಿನ್ ಉಪಯೋಗಿಸುವ ಬಗ್ಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಲಾಯಿತು.

# ಯೋಜನೆಗಳ ಫಲಾನುಭವಿಗಳಿಗೆ ತಲುಪಿಸಿ: ವಿಶ್ವೇಶ್ವರ ಹೆಗಡೆ



ಚನ್ನಮ್ಮನ ಕಿತ್ತೂರು:–

ಕೇಂದ್ರ ಹಾಗೂ ರಾಜ್ಯ ಸರ್ಕಾರ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕೆಂದು ಕೆನರಾ ಲೋಕಸಭಾ ಮತಕ್ಷೇತ್ರದ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸಮೀಪದ ಖಾನಾಪೂರ ತಾಲೂಕ ಪಟ್ಟಣದ ತಾಪಂ ಸಭಾಭವನದಲ್ಲಿ ಏರ್ಪಡಿಸಿದ ತಾಲೂಕಾ ಮಟ್ಟದ ಅಧಿಕಾರಿಗಳ ಪಿಡಿಓ ಮತ್ತು ಗ್ರಾಪಂ ಲೆಕ್ಕಿಗರ ಸಭೆ ಉದ್ದೇಶಿಸಿ ಮಾತನಾಡಿದವರು ಸಾರ್ವಜನಿಕರು ಕಛೇರಿಗೆ ಭೇಟಿ ನೀಡಿದಾಗ ಸೌಮ್ಯದಿಂದ ವರ್ತಿಸಿ ಮತ್ತು ಕಛೇರಿಗಳನ್ನು ಸ್ವಚ್ಛತೆ ಜೊತೆಗೆ ಅಂದವಾಗಿಟ್ಟುಕೊಳ್ಳಬೇಕು ಎಂದು ಖಡಕ್ಕಾಗಿ ಸೂಚಿಸಿದರು.

ಲೋಕೋಪಯೋಗಿ ಇಲಾಖೆ ಮಳೆಗಾಲದಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಬೇಕು. ರಸ್ತೆ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸನ್ನದ್ಧರಾಗಬೇಕು.

ಗುತ್ತಿಗೆದಾರರ ನಿರ್ಲಕ್ಷದಿಂದ ರಸ್ತೆ ಅಪಘಾತಗಳು ನಡೆದಲ್ಲಿ ಸಂಬಂಧಪಟ್ಟ ಅಧಿಕಾರಿಗಳೇ ಹೊಣೆಗಾರರು. ಮತ್ತು ಪ್ರವಾಹ ಎದುರಿಸಲು ಈಗಿನಿಂದಲೇ ಅಧಿಕಾರಿಗಳೆಲ್ಲರೂ ಬದ್ಧರಾಗಬೇಕು. ತಾಲೂಕಿನಲ್ಲಿ ಗಾಂಜಾ ಮಾರಾಟ ಮತ್ತು ಅವುಗಳ ಸೇವನೆಯಿಂದ ಸಮಾಜದ್ರೋಹಿ ಕೆಲಸ ನಡೆಯುತ್ತಿ ಅದಕ್ಕಾಗಿ ಕೂಡಲೇ ಅಧಿಕಾರಿಗಳು ಎಚ್ಚರ ವಹಿಸಬೇಕು ತಾಲೂಕನ್ನು ಗಾಂಜಾ ಮುಕ್ತವನ್ನಾಗಿಸುವ ನಿಟ್ಟಿನಲ್ಲಿ ನಾವೆಲ್ಲರೂ ಕೈಜೋಡಿಸೋಣ. ಬೀಟ್ ಪೋಲಿಸರು ತಮ್ಮ ವ್ಯಾಪ್ತಿಯಲ್ಲಿ ನಡೆಯುವ ಅಕ್ರಮಗಳ ಮೇಲೆ ನಿಗಾವಹಿಸಬೇಕು. ಕಾನೂನು ವ್ಯವಸ್ಥೆಗೆ ಕುಂದು ತರುವವರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು. ಮುಖ್ಯವಾಗಿ ಜೆಜಿಎಂ ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರ ಪೈಪಲೈನ್ ಅಳವಡಿಸಲು ತೆರೆದಿದ್ದ ಗುಂಡಿಗಳನ್ನು ಮುಚ್ಚಬೇಕೆಂದರು.

ಅಧಿಕಾರಿಗಳ ಸಭೆಯ ನಂತರ ಶಿವಸ್ಮಾರಕ ಸಭಾಭವನದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಸನ್ಮಾನ ಸ್ವೀಕರಿಸಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು. ಸಭೆಯಲ್ಲಿ ತಹಶೀಲ್ದಾರ, ತಾಪಂ ಇಓ ಸೇರಿದಂತೆ ತಾಲೂಕಿನ ವಿವಿಧ ಅಧಿಕಾರಿಗಳು ಸಿಬ್ಬಂದಿ, ಪಿಡಿಓ, ಗ್ರಾಮ ಲೆಕ್ಕಿಗರಿದ್ದರು. ಈ ವೇಳೆ ಶಾಸಕ ವಿಠ್ಠಲ ಹಲಗೇಕರ, ಬ್ಲಾಕ ಅಧ್ಯಕ್ಷ ಸಂಜಯ ಕೂಬಲ್, ಜಿಲ್ಲಾಉಪಾಧ್ಯಕ್ಷ ಪ್ರಮೋದ ಕೊಚೇರಿ, ಜೆಡಿಎಸ್ ಮುಖಂಡ ನಾಶೀರ ಬಾಗವಾನ, ಬಿಜೆಪಿ ಮಾಜಿ ಜಿಪಂ, ತಾಪಂ ಸದಸ್ಯರು, ಮುಖಂಡರು, ಕಾರ್ಯಕರ್ತರು, ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ಮಹಿಳೆಯರಿದ್ದರು. ಅಪ್ಪಯ್ಯಾ ಡೊಳ್ಳಿನ ಸ್ವಾಗತಿಸಿದರು.

# ಪ್ರವಾಹದ ಬಗ್ಗೆ ಜಾಗೃತಿ ಮೂಡಿಸಿ: ದಿವ್ಯ ಪ್ರಭು




ಧಾರವಾಡ:–

ಜಿಲ್ಲೆಯ ಎರಡು ಪ್ರಮುಖ ಹಳ್ಳಗಳಾದ ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಹರಿಯುವ ಮಾರ್ಗದ ಗ್ರಾಮಗಳಲ್ಲಿ ಪ್ರವಾಹದ ಕುರಿತು ಜಾಗೃತಿ ಮೂಡಿಸಬೇಕು ಮತ್ತು ಪ್ರವಾಹ ಉಂಟಾದಲ್ಲಿ ಜನ, ಜಾನುವಾರು ರಕ್ಷಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಮಾತನಾಡಿದರು.

ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಮುಂದಿನ ದಿನಗಳಲ್ಲಿ ಮಳೆ ಹೆಚ್ಚಳವಾಗುವ ಸಾಧ್ಯತೆ ಇದೆ. ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಪ್ರವಾಹ ಉಂಟುಮಾಡಬಹುದು. ತಹಶೀಲ್ದಾರರು ಗ್ರಾಮಗಳಿಗೆ ಭೇಟಿ ನೀಡಿ, ಪ್ರವಾಹದಿಂದ ಹಾನಿ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಆರೋಗ್ಯ ಇಲಾಖೆ ಗ್ರಾಮಗಳಲ್ಲಿ ಫಾಗಿಂಗ್ ವ್ಯವಸ್ಥೆ ಮಾಡಬೇಕು. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗಳು ಸಾಂಕ್ರಾಮಿಕ ರೋಗಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕೆಂದು ತಿಳಿಸಿದರು.

ಜಿಲ್ಲೆಯಲ್ಲಿ ಜೂನ್ 12 ರವರೆಗೆ 1.17 ಲಕ್ಷ ಹೆಕ್ಟರ್ ಭೂಮಿ ಬಿತ್ತನೆ ಆಗಿದೆ. ಕೃಷಿ ಇಲಾಖೆ ಅಧಿಕಾರಿಗಳು ಬಿತ್ತನೆ ಆಗಿರುವ ಬೆಳೆಗಳ ನಿರ್ವಹಣೆ ಮತ್ತು ಸಂರಕ್ಷಣೆಗೆ ಅಗತ್ಯ ಸಲಹೆಗಳನ್ನು ರೈತರಿಗೆ ನೀಡಬೇಕೆಂದು ಅವರು ಹೇಳಿದರು. ಸಭೆಯಲ್ಲಿ ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು, ಪಶುಪಾಲನೆ, ಅಗ್ನಿಶಾಮಕ, ಆರೋಗ್ಯ, ಮಹಾನಗರ ಪಾಲಿಕೆ, ಲೋಕೋಪಯೋಗಿ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

Editor:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Publisher:S.K.Wadeyar,#378/379, "MAYAGAPPA COMPLEX" 1st Stage 6th Phase Industrial Town west of chord Road Rajajinagar Bengaluru-560044.Karnataka.
Printer:SUCHITHRA PRINTER's & PUBLISHER's,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.
Owner:S.K.Wadeyar,#378/379, "MAYAGAPPA COMPLEX" 1se Stage 6th Phase Industrial Town west of chord Road Rajajinagar Bengaluru-560044.Karnataka.